ಸಂಪುಟ : 10 ಸಂಚಿಕೆ 9 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 4 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 9 Pages : 4+2 Price : 3.00 Tuesday February 4 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಚ್.ಕೆ. ಪಾಟೀಲ

# 'ಪಂಚ ಗ್ಯಾರಂಟಿ'ಯಿಂದ ಬಡಜನರ ಸೇವೆಗೆ ಅವಕಾಶ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದಿಂದ ಜಾರಿಯಾಗಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು, ಈ ಯೋಜನೆಗಳ ಅನುಷ್ಠಾನವು ಬಡಜನರ ಸೇವೆಗೆ ಒದಗಿದ ಬಹುದೊಡ್ಡ ಅವಕಾಶವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ವಿಡಿಯೋ ಸಭಾಂಗಣದಲ್ಲಿ ಸೋಮವಾರ ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ನೇತೃತ್ವ ವಹಿಸಿ ಅವರು ಮಾತನಾಡಿದರು.

ಪಂಚಗ್ಯಾರಂಟಿ ಯೋಜನೆಯ ಮಹತ್ವವನ್ನು ಅರ್ಥೈಸಿಕೊಳ್ಳುವುದು ಹಾಗೂ ಅವುಗಳ ಅನುಷ್ಠಾನವನ್ನು ಜವಾಬ್ದಾರಿಯುತವಾಗಿ ನಿರ್ವಹಿಸುವುದು ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಶ್ರದ್ಧೆಯಿಂದ ಕೆಲಸ ಮಾಡಬೇಕು. ಗದಗ ತಾಲೂಕು ಗ್ಯಾರಂಟಿ ಸಮಿತಿ ಸದಸ್ಯರು ಒಟ್ಟು 82 ಸಾವಿರ ಜನರನ್ನು ಸಂಪರ್ಕಿಸಿ ನಿಸ್ವಾರ್ಥತೆಯಿಂದ ಸೇವೆ ಸಲ್ಲಿಸಿದ್ದಾರೆ. 40 ಸಾವಿರ ಬಡಜನರಿಗೆ ಕಣ್ಣು ಪರೀಕ್ಷೆ ನಡೆಸಲಾಗಿದೆ. 4 ಸಾವಿರ ಜನರಿಗೆ ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸಿ 17 ಸಾವಿರ ಬಡಜನರಿಗೆ ಕನ್ನಡಕ ಕೊಡಿಸಲಾಗಿದೆ ಎಂದರು.

ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಂಚ ಗ್ಯಾರಂಟಿ ಯೋಜನೆ ಲಭಿಸುವಲ್ಲಿ ಫಲಾನುಭವಿಗಳಿಗೆ ಯಾವುದೇ ಅಡಚಣೆಗಳು ಉಂಟಾದರೆ ಅಂತಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಗ್ಯಾರಂಟಿ ಯೋಜನೆಗಳನ್ನು ತಲುಪಿಸುವಾಗ ಸಮೀಕ್ಷೆ ಮುಖಾಂತರ ಅರ್ಹ ಹಾಗೂ ಅನರ್ಹ ಫಲಾನುಭವಿಗಳ ಪಟ್ಟಿ ತಯಾರು ಮಾಡಬೇಕು. ಗೃಹಲಕ್ಷ್ಮೀ ಯೋಜನೆಗಳ ಫಲಾನುಭವಿಗಳಿಗೆ ಯೋಜನೆ ಸೌಲಭ್ಯದ ಕುರಿತು ಸಮೀಕ್ಷೆಯನ್ನು ಮಾಡುವಾಗ ಸಿಡಿಪಿಓಗಳು, ಅಂಗನವಾಡಿ ಕಾರ್ಯಕರ್ತೆಯರು ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದರು.




ಗೃಹಲಕ್ಷ್ಮೀ ಯೋಜನೆಯಡಿ ಅಕ್ಟೋಬರ್ 2024ರವರೆಗೆ ಗದಗ ತಾಲೂಕಿನಲ್ಲಿ 78334 ನೋಂದಣಿಯಾದ ಅರ್ಜಿಗಳ ಪೈಕಿ 77191 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಜಿಲ್ಲೆಯಲ್ಲಿ ವಾಕರಸಾ ಸಂಸ್ಥೆಯಿಂದ 11-6-2023ರಿಂದ 26-1-2025ರವರೆಗೆ 5.51 ಕೋಟಿ ಪುರುಷ ಪ್ರಯಾಣಿಕರು ಹಾಗೂ 8.39 ಕೋಟಿ ಮಹಿಳಾ ಪ್ರಯಾಣಿಕರು ಸೇರಿದಂತೆ ಒಟ್ಟಾರೆ 13.90 ಪ್ರಯಾಣಿಕರು ಪ್ರಯಾಣಿಸಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಗದಗ ತಾಲೂಕಿನಲ್ಲಿ ಸೆಪ್ಟೆಂಬರ್ 2024ರ ಮಾಹೆಯಲ್ಲಿ 28,842 ಫಲಾನುಭವಿಗಳಿಗೆ 1,62,16,470 ರೂ.ಗಳನ್ನು ಡಿಬಿಟಿ ಮೂಲಕ ಸಂದಾಯ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ 31-1-2025ರವರೆಗೆ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಾಗಿದೆ. 52909 ಸ್ಥಾವರಗಳ ನೋಂದಣಿಯಾಗಿದ್ದು, ಶೇ 99.33ರಷ್ಟು ಪ್ರಗತಿಯಾಗಿದೆ. ಗದಗ ಶಹರ ಉಪವಿಭಾಗದಲ್ಲಿ 45901 ಸ್ಥಾವರಗಳು ಅರ್ಹವಾಗಿದ್ದು, 45549 ಸ್ಥಾವರಗಳ ನೋಂದಣಿಯೊಂದಿಗೆ ಶೇ.99.23 ಪ್ರಗತಿಯಾಗಿದೆ. ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ ಡಿಸೆಂಬರ್ 2024ರವರೆಗೆ 1350 ಫಲಾನುಭವಿಗಳ ನೋಂದಣಿಯಾಗಿದ್ದು, 857 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ 1,69,77,000 ರೂ. ವರ್ಗಾವಣೆಯಾಗಿರುತ್ತದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು.

> ಬಡವರಿಗೆ ಗ್ಯಾರಂಟಿ ಯೋಜನೆಯ ಸೌಲಭ್ಯ ತಲುಪಿಸುವಲ್ಲಿ ವಿಳಂಬವಾಗಬಾರದು. ಸೌಲಭ್ಯಗಳನ್ನು ನಿಗದಿತ ಅವಧಿಯಲ್ಲಿಯೇ ತಲುಪಿಸುವಂತಾಗಬೇಕು. ಅನರ್ಹರನ್ನು ಹೊರತುಪಡಿಸಿ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನ ನೂರರಷ್ಟು ಪ್ರಗತಿ ಸಾಧಿಸಬೇಕು. ಭ್ರಷ್ಟಾಚಾರ ರಹಿತ, ಪಾರದರ್ಶಕ ಆಡಳಿತ ನಡೆಸಿ ಅರ್ಹರು ಇದರ ಲಾಭ ಪಡೆಯುವಂತೆ ಮಾಡಬೇಕು. ಈ ಕಾರ್ಯವನ್ನು ಗಂಭೀರವಾಗಿ ಪರಿಗಣಿಸಿ ಕೆಲಸ ನಿರ್ವಹಿಸಬೇಕು. ಬಡಜನರಿಗೆ ಸೇವೆ ಸಲ್ಲಿಸುವ ಪವಿತ್ರ ಕೆಲಸವಾಗಬೇಕು.
>
> **– ಡಾ. ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

ಜಿಲ್ಲೆಯಲ್ಲಿನ ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಂವಾದ ನಡೆಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಆಲೋಚಿಸಲಾಗಿದೆ. ಮಹಿಳಾ ಪ್ರಯಾಣಿಕರಿಗೆ ಅನುಕೂಲವಾಗುವ ಶಕ್ತಿ ಯೋಜನೆಯ ಸೌಲಭ್ಯ ನಿಗದಿತ ಕಾಲಾವಧಿಯಲ್ಲಿಯೇ ದೊರಕಬೇಕು. ಮಹಿಳೆಯರು ಶಕ್ತಿ ಯೋಜನೆ ಸೌಲಭ್ಯದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು. ಮಾರ್ಚ್ 16ರೊಳಗೆ ಪಂಚ ಗ್ಯಾರಂಟಿ ಯೋಜನೆ ಪೂರ್ಣ ಪ್ರಮಾಣದ ಪ್ರಗತಿ ಸಾಧಿಸಬೇಕೆಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಸಿಇಓ ಭರತ್ ಎಸ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ತಾ.ಪಂ ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಕೊರವನವರ, ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ಶಂಭು ಕಾಳೆ, ಮೀನಾಕ್ಷಿ ಬೆನಕಣ್ಣವರ, ದಯಾನಂದ ಪವಾರ, ಸಂಗು ಕರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ್, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶಸಿಂಗ್ ಮಿಟಾಡ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಕೃಷ್ಣಗೌಡ ಎಚ್.ಪಾಟೀಲ, ಸಾವಿತ್ರಿ ಹೂಗಾರ, ತಾಲೂಕಾ ಗ್ಯಾರಂಟಿ ಯೋಜನೆಯ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

---

## ಸೂರ್ಯನಮಸ್ಕಾರ ಯಜ್ಞ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**



ಎಸ್.ವಾಯ್. ಬಿ.ಎಂ. ಎಸ್. ಯೋಗಪಾಠ ಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗನಗರ ಗದಗ ಇವರ ಸಹಯೋಗದಲ್ಲಿ ರಥ ಸಪ್ತಮಿ ಆಚರಣೆ ಪ್ರಯುಕ್ತ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿನ ಬಸವಪ್ರಭೆ ಕ್ಯಾಂಪಸ್‌ನಲ್ಲಿ ಫೆ. 4ರ ಬೆಳಿಗ್ಗೆ 6.30 ಗಂಟೆಗೆ ಸೂರ್ಯ ನಮಸ್ಕಾರ ಯಜ್ಞ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮದ ಪೂರ್ವದಲ್ಲಿ ಬೆಳಿಗ್ಗೆ 6.30 ಗಂಟೆಗೆ ಸಾಮೂಹಿಕ ಸೂರ್ಯನಮಸ್ಕಾರ, ಪ್ರಾರ್ಥನೆ ನಂತರದಲ್ಲಿ ಉಪನ್ಯಾಸ, ಸಮಾರೋಪ ಕಾರ್ಯಕ್ರಮಗಳು ನಡೆಯುವವು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆರೋಗ್ಯ ಇಲಾಖೆಯ ದತ್ತಾತ್ರೇಯ ತಿರುಮಲೆ ಆಗಮಿಸುವರು. ಅಧ್ಯಕ್ಷತೆಯನ್ನು ಡಿ.ಜಿ.ಎಂ. ಆಯುರ್ವೆದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಸ್.ಬಿ. ಗೋವಿಂದಪ್ಪನವರ ವಹಿಸಿಕೊಳ್ಳುವರು.

ಆಸಕ್ತರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ಸಂಘಟಿಕರ ಪರವಾಗಿ ಬಸವ ಯೋಗ ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿ ಸದಸ್ಯರಾದ ಡಾ. ಎಂ.ವಿ. ಐಹೊಳ್ಳಿ ವಿನಂತಿಸಿದ್ದಾರೆ.

---

### ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಸರಕಾರಿ ಶಾಲೆಗಳ ಅಭಿವೃದ್ಧಿಗೆ ಬದ್ಧ

**■ ವಿಜಯಸಾಕ್ಷಿ ಸುದ್ದಿ, ರೋಣ**

ಮತಕ್ಷೇತ್ರದ ಸರಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದ್ದು, ಈಗಾಗಲೇ ಅನೇಕ ಸರಕಾರಿ ಶಾಲೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಸೋಮವಾರ ಅಬ್ಬಿಗೇರಿ ಗ್ರಾಮದ ಬಳಿಯಿರುವ ಮಾಜಿ ಪ್ರಧಾನಿ ದಿ. ಅಟಲ್ ಬಿಹಾರಿ ವಾಜಪೇಯಿ ಶಾಲೆಗೆ 2 ಕೋಟಿ ರೂಗಳ ಸಿಸಿ ರಸ್ತೆ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದರು.

ರೋಣ ಪಟ್ಟಣಕ್ಕೆ ವಾಜಪೇಯಿ ಶಾಲೆಯನ್ನು ತರಬೇಕು ಎನ್ನುವುದು ನನ್ನ ಕನಸಾಗಿತ್ತು. ಈ ಕನಸಿನಿಂದ ಇಂದು ಗ್ರಾಮೀಣ ಭಾಗದ ನೂರಾರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುತ್ತಿದೆ. ಸ್ವಂತ ಕಟ್ಟಡವಿಲ್ಲದ ಈ ಶಾಲೆಗೆ ಅಬ್ಬಿಗೇರಿ ಗ್ರಾಮದ ಬಳಿ ಜಮೀನು ಖರೀದಿಸಿ, ಸುಸಜ್ಜಿತ ದೊಡ್ಡ ಕಟ್ಟಡವನ್ನು ನಿರ್ಮಿಸುವ ಮೂಲಕ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಯಿತು. ಅಬ್ಬಿಗೇರಿ ಗ್ರಾಮಸ್ಥರ ಶಿಕ್ಷಣ ಪ್ರೇಮ ಮೆಚ್ಚುವಂತದ್ದು ಎಂದರು.




ಸರ್ವ ಜನಾಂಗದವರ ಮಕ್ಕಳಿಗೆ ಅಕ್ಷರ ಜ್ಞಾನ ಸಿಗಬೇಕು ಎಂಬ ಮಹತ್ವದ ಉದ್ದೇಶದಿಂದ ರೋಣ, ಗಜೇಂದ್ರಗಡ ಪಟ್ಟಣಗಳಿಗೆ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವಸತಿ ನಿಲಯ, ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ನರೇಗಲ್ಲ ಹಾಗೂ ರೋಣದಲ್ಲಿ ಈಗಾಗಲೇ ಆರಂಭಿಸಲಾಗಿದೆ. ಮುಖ್ಯವಾಗಿ ಮತಕ್ಷೇತ್ರದಲ್ಲಿ ಸರಕಾರಿ ಶಾಲೆಗಳ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಗಳಿಸಿ ಖಾಸಗಿ ಸಂಸ್ಥೆಗಳಿಗಿಂತ ನಾವೇನು ಕಮ್ಮಿಯಿಲ್ಲ ಎಂದು ಸಾಧಿಸಿ ತೋರಿಸಿದ್ದಾರೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಮತ್ತಷ್ಟು ಗುಣಮಟ್ಟದ ಶಿಕ್ಷಣ ನಿಡಬೇಕು. ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೆ ಅಕ್ಷರ ಜ್ಞಾನ ಪಡೆಯುವತ್ತ ಗಮನ ಹರಿಸಬೇಕು ಎಂದರು.

> ವಾಜಪೇಯಿ ಶಾಲೆಯಲ್ಲಿ ಎದುರಾಗಿದ್ದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ 8 ಕಿ.ಮೀ ದೂರದ ಅಬ್ಬಿಗೇರಿ ಗ್ರಾಮದಿಂದ ಪೈಪ್‌ಲೈನ್ ಅಳವಡಿಸಿ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲಾಗಿದೆ.
>
> **– ಜಿ.ಎಸ್. ಪಾಟೀಲ.**
> **ಶಾಸಕರು, ರೋಣ.**

ಇದೇ ಸಂದರ್ಭದಲ್ಲಿ ವಾಜಪೇಯಿ ಶಾಲಾ ವಿದ್ಯಾರ್ಥಿಗಳ ಪಾಲಕರ ಅನುಕೂಲಕ್ಕಾಗಿ ಬಸ್ ತಂಗುದಾಣಕ್ಕೆ ಭೂಮಿ ಪೂಜೆಯನ್ನು ನೆರವೇರಿಸಿದರು. ಗ್ರಾ.ಪಂ ಅಧ್ಯಕ್ಷೆ ಲಲಿತಾ ರಾಠೋಡ ಅಧ್ಯಕ್ಷತೆ ವಹಿಸಿದ್ದರು. ಎಸ್. ಎಚ್. ಸೋಂಪುರ, ಯೂಸುಪ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಬಸವರಾಜ ತಳವಾರ, ರೂಪಾ ಅಂಗಡಿ, ಬಸವರಾಜ ಪಲ್ಲೇದ, ಬಾಬುಗೌಡ ಪಾಟೀಲ ಸೇರಿದಂತೆ ಗ್ರಾ.ಪಂ ಸದಸ್ಯರು ಹಾಗೂ ಮುಖಂಡರು ಉಪಸ್ಥಿತರಿದ್ದರು.

---

### ನೂತನ ಕ್ಯಾಥಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೆಷಾಲಿಟಿ ಹೃದ್ರೋಗ ಚಿಕಿತ್ಸಾ ಘಟಕ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಜಿಮ್ಸ್ ಆಸ್ಪತ್ರೆ ಶ್ರೇಷ್ಠ ಸೇವೆ ನೀಡಲಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಮ್ಸ್ ಆಸ್ಪತ್ರೆ ಸೇವೆಯಲ್ಲಿ ಶ್ರೇಷ್ಠ ಆಸ್ಪತ್ರೆಯಾಗಲಿ. ಇಲ್ಲಿ ಅತ್ಯುನ್ನತ ಸೇವೆಗಳು ಸರಳವಾಗಿ ಸಿಗಲಿ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಹೇಳಿದರು.

ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆ ಆವರಣದಲ್ಲಿ ಸೋಮವಾರ ವೈದ್ಯಕೀಯ ಶಿಕ್ಷಣ ಇಲಾಖೆ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವತಿಯಿಂದ ನೂತನ ಕ್ಯಾಥಲ್ಯಾಬ್ ಸೌಲಭ್ಯದೊಂದಿಗೆ ಸೂಪರ್ ಸ್ಪೆಷಾಲಿಟಿ ಹೃದ್ರೋಗ ಚಿಕಿತ್ಸಾ ಘಟಕದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.



> ಗದುಗಿನಲ್ಲಿ ಮಾನವ ಸಂಪನ್ಮೂಲ ಸಕಾಲಕ್ಕೆ ಸೇವೆ ಒದಗಿಸಲು ಮುಂದಾಗಬೇಕು. ನಾವು ಇಲ್ಲಿಂದ ಜಯದೇವ ಆಸ್ಪತ್ರೆಗೆ ಚಿಕಿತ್ಸೆಗೆ ಗದಗ ಜನರನ್ನು ಕರೆದುಕೊಂಡು ಹೋಗಿ ಬಂದಿದ್ದೇವೆ. ಅಲ್ಲಿನ ಮಾನವೀಯ ಸೇವೆಯ ಗೌರವ ಇಲ್ಲಿನ ಜಿಮ್ಸ್‌ನಲ್ಲಿ ಲಭ್ಯವಾಗಬೇಕು ಎಂದು ಜಿಮ್ಸ್ ನಿರ್ದೇಶಕರಿಗೆ ಸೂಚನೆ ನೀಡಿದರು.

ಜಿಮ್ಸ್ ಆರಂಭವಾಗಿ 10 ವರ್ಷ ಪೂರ್ಣಗೊಳಿಸಿದೆ. ಇಲ್ಲಿ ಉತ್ತಮ ಕೆಲಸಗಳನ್ನು ಮಾಡುವ ಮೂಲಕ ಮಹತ್ವದ ಸಾಧನೆ ಮಾಡಿದ್ದೇವೆ. 185 ಕೋಟಿ ರೂ ವೆಚ್ಚದ ಕಾಲೇಜು ಕಟ್ಟಡ ನಿರ್ಮಾಣ ಆಗಿದೆ. ಒಟ್ಟಾರೆ 366 ಕೋಟಿ ರೂ ಖರ್ಚು ಮಾಡಿದ್ದೇವೆ. 10 ಕೋಟಿ ವೆಚ್ಚದಲ್ಲಿ ಕ್ಯಾಥ್‌ಲ್ಯಾಬ್ ಮಾಡಿದ್ದು, ಬಡವರಿಗೆ ಹೆಚ್ಚು ಅನುಕೂಲ ಆಗಲಿ ಎಂದರು.

ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಪ್ರಾಸ್ತಾವಿಕ ಮಾತನಾಡಿ, ಈ ಕ್ಯಾಥ್ ಲ್ಯಾಬ್ ಸಚಿವ ಎಚ್.ಕೆ. ಪಾಟೀಲರ ಕನಸಿನ ಕೂಸಾಗಿದ್ದು, 2018ರ ಆಯ-ವ್ಯಯದಲ್ಲಿ ಕ್ಯಾಥ್‌ಲ್ಯಾಬ್ ಘೋಷಣೆಯಾಯಿತು. ವರ್ಷದ ಹಿಂದೆ ಸಿಎಂ ಅವರು ಶಂಕುಸ್ಥಾಪನೆ ಮಾಡಿದ್ದು, ಇಂದು ಉದ್ಘಾಟನೆಯಾಗುತ್ತಿರುವುದು ಸಂತಸ ತಂದಿದೆ ಎಂದರು.

ಹೃದಯ ಸಂಬಂಧಿ ಕಾಯಿಲೆಗೆ ಇಲ್ಲಿ ಉನ್ನತ ತಂತ್ರಜ್ಞಾನ ಹೊಂದಿದ ಯಂತ್ರಗಳಿದ್ದು, ಶಸ್ತ್ರಚಿಕಿತ್ಸೆ ಮಾಡಲು ಅವಕಾಶ ಇದೆ. ಹೃದಯದ ಕೆಲಸವನ್ನು ಹೃದಯದಿಂದ ಮಾಡು ಎಂಬ ಈ ವರ್ಷದ ಘೋಷವಾಕ್ಯವನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಿದವರು ಸಚಿವರಾದ ಎಚ್.ಕೆ. ಪಾಟೀಲರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಈ ದಿನ ಮೆಡಿಕಲ್ ಕಾಲೇಜು ಇತಿಹಾಸದಲ್ಲಿ ನೆನಪಿಡುವಂತಿದೆ. ಇತ್ತೀಚಿನ ದಿನಗಳಲ್ಲಿ ಹೃದಯ ಸಂಬಂಧಿ ಕಾಯಿಲೆ ಹೆಚ್ಚುತ್ತಿದೆ. ಬಿಪಿಎಲ್ ಕಾರ್ಡುದಾರರಿಗೆ ಅತ್ಯಂತ ಕಡಿಮೆ ದರದಲ್ಲಿ ಚಿಕಿತ್ಸೆ ಲಭ್ಯವಾಗಲಿದ್ದು, ಈ ಭಾಗದ ಸಾರ್ವಜನಿಕರು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಿ ಎಂದರು.

▸▸ 3ನೇ ಪುಟಕ್ಕೆ

---

### ಹಾಲು ಕೊಡುವ-ಕೊಡದಿರುವ ಎಮ್ಮೆಯನ್ನು ಒಂದೇ ಸಾಲಿನಲ್ಲಿ ಕಟ್ಟಬಾರದು: ಬಿ.ಶ್ರೀರಾಮುಲು

# ನಾನು ಪಕ್ಷ ಬಿಡುತ್ತೇನೆ ಎಂದಿಲ್ಲ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬರಲು ಗಟ್ಟಿಯಾದ ನಿರ್ಧಾರ, ಸೂಚನೆ, ಆದೇಶ ನೀಡುವಂತಹ ಕೆಲಸವನ್ನು ರಾಷ್ಟ್ರೀಯ ನಾಯಕರು ಮಾಡಬೇಕು. ಯಾರು ಶ್ರಮಪಟ್ಟು ಪಕ್ಷಕ್ಕಾಗಿ ದುಡಿಯುತ್ತಾರೋ, ರಾಜ್ಯದಲ್ಲಿ ಯಾರು ಸಂಘಟನೆ ಮಾಡುತ್ತಾರೋ ಅಂತಹ ನಾಯಕರಿಗೆ ಗೌರವ ಕೊಡಬೇಕು ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಹೇಳಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಲು ಕೊಡುವ, ಹಾಲು ಕೊಡದೇ ಇರುವ ಎಮ್ಮೆಯನ್ನು ಒಂದೇ ಸಾಲಿನಲ್ಲಿ ಕಟ್ಟಿ ಹಾಕುವುದು ಸರಿಯಲ್ಲ. ಅದನ್ನು ಯಾರೂ ಒಪ್ಪುವುದೂ ಇಲ್ಲ. ಕೆಲಸ ಮಾಡುವವರನ್ನು, ಕೆಲಸ ಮಾಡದಿರುವವರನ್ನು ಒಂದೇ ಸಾಲಿನಲ್ಲಿ ಕಟ್ಟಿ ಹಾಕುವ ಕೆಲಸವಾಗುತ್ತಿದೆ ಎಂದು ಸ್ವಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ನಾನು ಪಕ್ಷ ಬಿಡುತ್ತೇನೆ ಎಂದು ಎಲ್ಲಿಯೂ ಹೇಳಿಲ್ಲ. ಪಕ್ಷ ಬಿಡುವ ಸಂದರ್ಭ ಬಂದಲ್ಲಿ ಮಾಧ್ಯಮಗಳ ಮುಂದೆ ಬಹಿರಂಗವಾಗಿ ಹೇಳುತ್ತೇನೆ. ಪಕ್ಷ ಬಿಡುವ ವಿಚಾರದಲ್ಲಿ ಯಾವುದೇ ಮುಲಾಜಿಗೂ ಬೀಳುವುದಿಲ್ಲ. ಆದರೆ ಬಡವ, ಶ್ರಮಿಕ, ರೈತ ಹಾಗೂ ಪಕ್ಷ ಕಟ್ಟಿ ಬೆಳೆಸಿದ ಕಾರ್ಯಕರ್ತರ ಭಾವನೆಗೆ ಗೌರವ ಕೊಡುತ್ತೇನೆ ಎಂದರು.



ಈಗಾಗಲೇ ಬೆಂಗಳೂರು ಭಾಗದಿಂದ ಅಶ್ವಥನಾರಾಯಣ ಅವರು ತಾವೂ ಕೂಡ ರಾಜ್ಯಾಧ್ಯಕ್ಷ ರಾಗಬೇಕು ಎನ್ನುವ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅದೇ ರೀತಿ ಬಸನಗೌಡ ಪಾಟೀಲ, ರಮೇಶ ಜಾರಕಿಹೊಳಿ, ಅನಂತಕುಮಾರ ಹೆಗಡೆ, ಕಲ್ಯಾಣ ಕರ್ನಾಟಕ ಭಾಗದಿಂದ ಶ್ರೀರಾಮುಲು ಕೂಡ ರಾಜ್ಯಾಧ್ಯಕ್ಷರಾಗಬೇಕು ಎಂಬ ಆಸೆಗಳಿರಬಹುದು. ಆ ಎಲ್ಲ ಆಸೆಗಳಿಗೆ ಹೈಕಮಾಂಡ್ ಮೂಗುದಾಣ ಹಾಕಲಿದೆ. ಹೈಕಮಾಂಡ್ ಸೂಚನೆ ಇದ್ದರೆ ವಿಜಯೇಂದ್ರ ಮತ್ತೆ ರಾಜ್ಯಾಧ್ಯಕ್ಷರಾಗಲಿ. ಇನ್ನೂ ನಾಲ್ಕೈದು ಬಾರಿ ಅವರೇ ಆಗಲಿ. ಆದರೆ, ಹೈಕಮಾಂಡ್ ನಿರ್ಧಾರದ ವಿರುದ್ಧ ಮಾತಾಡುವುದರಿಂದ ಏನೂ ಆಗುವುದಿಲ್ಲ ಎಂದರು.

> ರಾಜ್ಯಾಧ್ಯಕ್ಷರ ಬದಲಾವಣೆ ಕುರಿತು ರಾಜ್ಯದ ಬಿಜೆಪಿ ನಾಯಕರು ತಮ್ಮ ಅಭಿಪ್ರಾಯ ತಿಳಿಸಲು ದೆಹಲಿಗೆ ತೆರಳಿದ್ದಾರೆ. ಹೈಕಮಾಂಡ್ ಆ ವಿಷಯದಲ್ಲಿ ನಿರ್ಧಾರ ಕೈಗೊಳ್ಳಲಿದೆ. ರಾಜ್ಯಾಧ್ಯಕ್ಷರ ಬದಲಾವಣೆ ವಿಷಯದಲ್ಲಿ ಪ್ರತಿಯೊಬ್ಬರೂ ತಮ್ಮ ಮನಸ್ಸಿನ ಭಾವನೆಗಳನ್ನು ವ್ಯಕ್ತಪಡಿಸುವುದರಲ್ಲಿ ತಪ್ಪಿಲ್ಲ. ಆದರೆ ಸಂಸದರಾದ ಸುಧಾಕರ, ರಮೇಶ ಜಾರಕಿಹೊಳಿ ಹಾಗೂ ಬಸನಗೌಡ ಪಾಟೀಲ ಯತ್ನಾಳ ಅವರು ತಮ್ಮಲ್ಲಿರುವ ನೋವುಗಳನ್ನು, ತಮ್ಮ ಅನಿಸಿಕೆಗಳನ್ನು ಹೇಳಿಕೊಂಡಿದ್ದಾರೆ. ಪಕ್ಷದ ಹಿತದೃಷ್ಟಿಯಿಂದ ಏನು ಮಾತನಾಡಬೇಕು ಎಂಬುದನ್ನು ಮಾತನಾಡುತ್ತಿದ್ದಾರೆ. ಇದರಲ್ಲಿ ಯಾವುದೇ ಸ್ವಾರ್ಥವಿಲ್ಲ ಎಂದು ಶ್ರೀರಾಮುಲು ತಿಳಿಸಿದರು.

## ಸಂಪಾದಕೀಯ

# ಶಿಕ್ಷಣ ವ್ಯವಸ್ಥೆಯು ಬದಲಾಗಲಿ

ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಇನ್ನು ಕೆಲವೇ ದಿನಗಳಲ್ಲಿ 15,000 ಶಿಕ್ಷಕರನ್ನ ಭರ್ತಿ ಮಾಡಿಕೊಳ್ಳುವ ಭರವಸೆ ನೀಡಿದ್ದಾರೆ. ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ನಿಜ. ಆ ಕೊರತೆಯನ್ನ ತುಂಬಬೇಕಾಗಿರುವುದು ಸರ್ಕಾರದ ಕರ್ತವ್ಯವೂ ಹೌದು.

ಆದರೆ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ದೊರೆಯದಿರುವುದರ ಬಗ್ಗೆಯೂ ಶಿಕ್ಷಣ ಸಚಿವರು ಚಿಂತನೆ ನಡೆಸಬೇಕಾಗಿದೆ. ಔರಾದ್ ತಾಲೂಕಿನಲ್ಲಿ ಶಾಸಕ ಪ್ರಭು ಚೌಹಾಣ್ ಸ್ವತಃ ಇಂತದೊಂದು ಹೇಳಿಕೆ ನೀಡಿದ್ದಾರೆ. ಪ್ರಾಥಮಿಕ ಶಾಲೆ ಮಕ್ಕಳಿಗೆ ಕನಿಷ್ಠ ಓದು ಬರಹವೂ ಬರುವುದಿಲ್ಲ ಎಂದಿರುವುದು ಚಿಂತನೆಗೆ ಗ್ರಾಸವಾಗಿದೆ.

ಅಷ್ಟೇ ಅಲ್ಲದೆ ಕೊಪ್ಪಳ ಜಿಲ್ಲೆಯ ಪ್ರೌಢಶಾಲಾ ಶಿಕ್ಷಕರು ಸಹ ಅಲ್ಲಿನ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಪತ್ರ ಬರೆದು, ಪ್ರಾಥಮಿಕ ಶಾಲೆಯಿಂದ ಬಂದ ಮಕ್ಕಳಿಗೆ ಈಗಲೂ ಓದಲು ಬರೆಯಲು ಬರುತ್ತಿಲ್ಲ. ಹೀಗಾದರೆ ಆ ಮಕ್ಕಳು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹೇಗೆ ಉತ್ತಮ ಫಲಿತಾಂಶ ದಾಖಲಿಸಲು ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ಸ್ವತಃ ಶಿಕ್ಷಕರೇ ಪ್ರಾಥಮಿಕ ಶಾಲೆಯ ಶಿಕ್ಷಣದ ಬಗ್ಗೆ ಆತಂಕ ವ್ಯಕ್ತಪಡಿಸಿರುವುದು ಗಂಭೀರ ವಿಷಯ. ಒಂದು ಕಡೆ ಪ್ರಾಥಮಿಕ ಶಾಲೆಗಳಿಗೆ ಅಗತ್ಯ ಮೂಲ ಸೌಕರ್ಯಗಳಿಲ್ಲ. ಶಿಕ್ಷಕರಿಲ್ಲ. ಸರ್ಕಾರಿ ಕನ್ನಡ ಶಾಲೆಗಳನ್ನು ಮುಚ್ಚುವ ಹಂತಕ್ಕೆ ಬಂದಿವೆ. ಇಂತಹ ಸಂದರ್ಭದಲ್ಲಿ ಅಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವುದಿಲ್ಲ ಎನ್ನುವಂತಾದರೆ ಭವಿಷ್ಯದಲ್ಲಿ ಬಡವರು ಸಹ ಸರ್ಕಾರಿ ಶಾಲೆಗಳಿಗೆ ತಮ್ಮ ಮಕ್ಕಳನ್ನ ಸೇರಿಸಲು ಯೋಚಿಸಬೇಕಾದ ಕಾಲ ದೂರವಿಲ್ಲ.

### ಮೊರಬ ಗ್ರಾಮದ ಕುರಿ ಸಾಕಾಣಿಕೆ ಕೇಂದ್ರಕ್ಕೆ ಶಾಸಕ, ಜಿಲ್ಲಾಧಿಕಾರಿ ಭೇಟಿ

# ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆ ಯಶೋಗಾಥೆ–ರೈತನ ಸಾಹಸಕ್ಕೆ ಮೆಚ್ಚುಗೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕುರಿ ಸಾಕಾಣಿಕೆಯಲ್ಲಿ ಮಾದರಿಯಾದ ಮೊರಬ ಗ್ರಾಮದ ರೈತ ಗಂಗಪ್ಪ ಕಾಲವಾಡ ಅವರ ಕುರಿ ಸಾಕಾಣಿಕೆ ಕೇಂದ್ರಕ್ಕೆ ಸೋಮವಾರ ಮಧ್ಯಾಹ್ನ ಶಾಸಕ ಎನ್.ಎಚ್.ಕೋನರಡ್ಡಿ ಹಾಗೂ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಭೇಟಿ ನೀಡಿ, ಪ್ರಗತಿಪರ ರೈತನ ಸಾಹಸಕ್ಕೆ ಸೈ ಎಂದು ಆತನ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ರೈತರು ಕೃಷಿ ಜೊತೆಗೆ ಉಪ ಕೃಷಿ ಚುಟುವಟಿಕೆಗಳಲ್ಲಿ ತೊಡಗಿಸಿಕೊಂಡಾಗ ಮಾತ್ರ ಲಾಭದಾಯಕತೆ ಹೊಂದಲು ಸಹಾಯವಾಗುತ್ತದೆ. ಹವಾಮಾನ ವೈಪರಿತ್ಯದಿಂದಾಗಿ ಬೆಳೆಗಳಲ್ಲಿ ಬದಲಾವಣೆ ಆಗುತ್ತಿವೆ. ಇದರಿಂದ ಉತ್ಪಾದನೆ, ಲಾಭದ ಮೇಲೂ ಪರಿಣಾಮ ಬೀರುತ್ತಿದೆ ಎಂದರು.

ರೈತರು ಕೃಷಿ ಜೊತೆಗೆ ಕುರಿ–ಆಡು ಸಾಕಾಣಿಕೆ, ಹೈನುಗಾರಿಕೆ, ತೋಟಗಾರಿಕೆ, ಸಾವಯವ ಧಾನ್ಯ, ಮಿಶ್ರ ಬೆಳೆ, ಅವಕಾಶವಿದ್ದಲ್ಲಿ ಮೀನುಗಾರಿಕೆ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಒಂದರಲ್ಲಿ ನಷ್ಟವಾದರೂ ಇನ್ನೊಂದು ಕೈ ಹಿಡಿಯುತ್ತದೆ. ಇಲಾಖೆಯಿಂದ ಹೆಚ್ಚು ಹೆಚ್ಚು ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತದೆ ಎಂದರು.

ಶಾಸಕ ಎನ್.ಎಚ್.ಕೋನರಡ್ಡಿ ಅವರು ಮಾತನಾಡಿ, ಗಂಗಪ್ಪ ಪ್ರಗತಿಪರ ರೈತ. ಇವರ ಸಾಧನೆ ಉಳಿದ ರೈತರಿಗೂ ಮಾದರಿ ಆಗಿದೆ. ರಾಜ್ಯ ಸರಕಾರ ಕೃಷಿ ಜೊತೆಗೆ ಕೃಷಿಗೆ ಪೂರಕವಾದ ಉಪ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಇಲಾಖೆಗಳ ಮೂಲಕ ನೆರವು ನೀಡುತ್ತಿದೆ. ರೈತರು ಈ ಯೋಜನೆ, ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದರು.

ಪಶುಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆಯ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯಡಿ 2023 ರಿಂದ ರೈತ ಗಂಗಪ್ಪ ಕಾಲವಾಡ ಕೇಂದ್ರ ಸರಕಾರದ ರೂ. 50 ಲಕ್ಷ ಸಹಾಯ ಧನದ ಅನುದಾನ ಹಾಗೂ ಫಲಾನುಭವಿ ಪಾಲು ಮತ್ತು ಬ್ಯಾಂಕ್ ಸಾಲ ಸೇರಿ ರೂ.50 ಲಕ್ಷ ಯೋಜನಾ ಮೊತ್ತದ ಕುರಿ ಸಾಕಾಣಿಕೆ ಕೇಂದ್ರ ಆರಂಭಿಸಿದ್ದಾರೆ.



ರೈತ ಗಂಗಪ್ಪ ಕಾಲವಾಡ ಮಾತನಾಡಿ, ನನಗೆ 10 ಎಕರೆ ಜಮೀನು ಇದೆ. ಆದರೆ ಅಕಾಲಿಕ ಮಳೆ, ಪ್ರವಾಹ ಮತ್ತು ಬರ ಪರಿಸ್ಥಿತಿಯಿಂದ ಕೃಷಿ ಕಾಯಕ ನಿಂತು ಹೋಗುವ ಸ್ಥಿತಿಗೆ ಬಂದಿತ್ತು. ಇದೇ ಸಂದರ್ಭದಲ್ಲಿ ಪಶುಪಾಲನೆ ಇಲಾಖೆ ಅಧಿಕಾರಿಗಳು, ಪ್ರಗತಿಪರ ರೈತರಿಗೆ ಇಲಾಖೆ ಯೋಜನೆಗಳ ಪರಿಚಯ ಮತ್ತು ಪರ್ಯಾಯ ಕೃಷಿ ಬಗ್ಗೆ ಜಾಗೃತಿ ಕಾರ್ಯಕ್ರಮ ಆಯೋಜಿಸಿ, ಮಾಹಿತಿ ಮತ್ತು ತರಬೇತಿ ನೀಡಿದರು.

ಉಪ ಕೃಷಿ ಯೋಜನೆಯಾಗಿ ನೀನು ಕುರಿ ಸಾಕಾಣಿಕೆ ಮಾಡು, ಇದೇ ಇಲಾಖೆಯ ಸಹಾಯಧನ, ಬೆಂಬಲ ಇದೆ ಎಂದರು. ಒಂದು ಗುಂಟೆ ಜಾಗದಲ್ಲಿ ಆರಂಭಿಸಿರುವ ನನ್ನ ಕುರಿ ಸಾಕಾಣಿಕೆ ಕೇಂದ್ರದಲ್ಲಿ ಇಂದು 500 ಕುರಿ, ನೂರಕ್ಕು ಹೆಚ್ಚು ಆಡುಗಳು, 300 ಕುರಿ ಮರಿಗಳು, 50 ಬೀಜದ ಟಗರು ಇವೆ. ವಾರದಲ್ಲಿ ಕನಿಷ್ಠ ನಾಲ್ಕು ದಿನ ಸಮೀಪದ ದನದ ಸಂತೆಗಳಿಗೆ ಹೋಗಿ ಕುರಿ, ಟಗರು ಮಾರಾಟ ಮಾಡುತ್ತೇವೆ ಎಂದು ತಿಳಿಸಿದರು.

ಒಂದು ಕುರಿ ಕನಿಷ್ಠ 10 ರಿಂದ 20 ಸಾವಿರ, ಆರು ತಿಂಗಳ ಕುರಿ ಮರಿ 5 ರಿಂದ 10 ಸಾವಿರ, ಟಗರು ಕನಿಷ್ಠ 15 ರಿಂದ 30 ಸಾವಿರ ಬೆಲೆಗೆ ಮಾರಾಟವಾಗುತ್ತವೆ. ಕುರಿ ಹಿಕ್ಕೆಯ ಗೊಬ್ಬರ ಪ್ರತಿ ಟೇಲರಗೆ 15 ರಿಂದ 20 ಸಾವಿರ ಬರುತ್ತದೆ.

ನಾವು ಹೂಡಿದ ಬಂಡವಾಳಕ್ಕಿಂತ ಹೆಚ್ಚು ಲಾಭ ಬಂದಿದೆ ಎಂದು ಗಂಗಪ್ಪ ಹೇಳಿದರು. ಪಶು ಇಲಾಖೆ ಬೆಂಬಲ, ಸಹಾಯ ಸಾಕ್ಷಿದೆ ಎಂದು ಸ್ಮರಿಸಿದರು.

ಪಶುಪಾಲನೆ ಇಲಾಖೆ ಉಪ ನಿರ್ದೇಶಕ ಡಾ.ರವಿ ಸಾಲಿಗೌಡರ ಪ್ರಾಸ್ತಾವಿಕವಾಗಿ ಮಾತನಾಡಿ, ಈ ಯೋಜನೆಯಡಿ ಶೇ.50 ಕ್ಕಿಂತ ಹೆಚ್ಚು ಸಹಾಯಧನ ರೈತನಿಗೆ ನೀಡಲಾಗಿದ್ದು, ಕೊನೆಯ ಕಂತಿನ ಸಹಾಯಧನ ಈ ತಿಂಗಳಲ್ಲಿ ಜಮೆ ಆಗುತ್ತದೆ. ಈ ಕುರಿ ಸಾಕಾಣಿಕೆ ಕೇಂದ್ರದ ಕುರಿಗಳು ಆಕಸ್ಮಿಕ ಸಾವಿಗೆ ತುತ್ತಾದಲ್ಲಿ ಪ್ರತಿ ಕುರಿಗೆ ರೂ.15 ಸಾವಿರ ಪರಿಹಾರ ನೀಡಲಾಗುತ್ತದೆ. ಅದಕ್ಕಾಗಿ ಪ್ರತಿ ಕುರಿಯನ್ನು ರಾಷ್ಟ್ರೀಯ ಜಾನುವಾರು ಮಿಷನ್ ಯೋಜನೆಯಡಿ, ವಿಮೆಗೆ ಒಳಪಡಿಸಲಾಗಿದೆ ಎಂದರು.

> ಗಂಗಪ್ಪ ಕಾಲವಾಡ ಅವರ ಯಶಸ್ಸಿನ ಯಶೋಗಾಥೆ ಕೇಳಿದವರು ಹಾಗೂ ನೋಡಿದವರು ತಾಲೂಕಿನ ಇನ್ನೂ 3 ಜನ ರೈತರು ಇಂತಹ ಕುರಿ ಸಾಕಾಣಿಕೆ ಕೇಂದ್ರ ಮಾಡಲು ಮುಂದೆ ಬಂದಿದ್ದಾರೆ. ಅವರ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗುತ್ತಿದೆ.
>
> **–ಡಾ.ಮನೋಹರ ದ್ಯಾಬೇರಿ,**
> **ಸಹಾಯಕ ನಿರ್ದೇಶಕರು,**
> **ಪಶುಪಾಲನ ಇಲಾಖೆಯ ನವಲಗುಂದ.**

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ತಹಸೀಲ್ದಾರ ಸುದೀರ ಸಾಹುಕಾರ, ರೈತ ಮುಖಂಡ ಮಲ್ಲಿಕಾರ್ಜುನ ಬಾಳನಗೌಡರ ಸೇರಿದಂತೆ ಅನೇಕ ಪ್ರಗತಿಪರ ರೈತರು, ಇತರರು ಉಪಸ್ಥಿತರಿದ್ದರು.



# ರಾಷ್ಟ್ರಪತಿಗಳ ಭಾಷಣವನ್ನು ಓದಲು ಕಷ್ಟವಾಯಿತು: ರಾಹುಲ್ ಗಾಂಧಿ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಬಜೆಟ್ ಅಧಿವೇಶನಕ್ಕೆ ಮುಂಚಿತವಾಗಿ ರಾಷ್ಟ್ರಪತಿಗಳು ಸಂಸತ್ತಿನಲ್ಲಿ ಮಾಡಿದ ಜಂಟಿ ಭಾಷಣವು ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ಮಾಡಿದ 'ವಿಷಯಗಳ ಲಾಂಡ್ರಿ ಪಟ್ಟಿ' ಎಂದು ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ಸೋಮವಾರ ಹೇಳಿದ್ದಾರೆ. ಭಾಷಣದ ಪ್ರತಿ ಓದಲು ನಾನು ಹೆಣಗಾಡಿದ್ದೇನೆ ಎಂದು ಹೇಳಿದರು.

"ನಾನು ಹೇಳಲೇಬೇಕು, ರಾಷ್ಟ್ರಪತಿಗಳ ಭಾಷಣದಲ್ಲಿ ಏನು ಹೇಳಲಾಗುತ್ತಿದೆ ಎಂಬುದರ ಬಗ್ಗೆ ನನ್ನ ಗಮನವನ್ನು ಉಳಿಸಿಕೊಳ್ಳಲು ಹೆಣಗಾಡಿದೆ. ಏಕೆಂದರೆ, ನಾನು ಕಳೆದ ಬಾರಿ ಮತ್ತು ಅದಕ್ಕೂ ಮೊದಲು ಅದೇ ರೀತಿಯ ಭಾಷಣ ಕೇಳಿದ್ದೆ" ಎಂದು ಅವರು ಲೋಕಸಭೆಯಲ್ಲಿ ಧನ್ಯವಾದ ನಿರ್ಣಯಕ್ಕೆ ಉತ್ತರಿಸುತ್ತಾ ಹೇಳಿದರು.

# 'ಮಿಸ್ಟರ್ ವಜ್ರದೇಹಿ–2025' ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನಲ್ಲಿ ಮೊಟ್ಟ ಮೊದಲ ಬಾರಿಗೆ ರಾಜ್ಯಮಟ್ಟದ ದೇಹದಾರ್ಢ್ಯ ಸ್ಪರ್ಧೆ 'ಮಿಸ್ಟರ್ ವಜ್ರದೇಹಿ–2025'ನ್ನು ಫೆ. 2ರಂದು ಇಲ್ಲಿನ ಅಂಬೇಡ್ಕರ ಭವನದಲ್ಲಿ ಏರ್ಪಡಿಸಲಾಗಿತ್ತು.

ಕಾರ್ಯಕ್ರಮವನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೋಳಿ ಉದ್ಘಾಟಿಸಿದರು. ದಿವ್ಯ ಸಾನ್ನಿಧ್ಯವನ್ನು ಬೈರನಹಟ್ಟಿಯ ವಿರಕ್ತ ಮಠದ ಪೂಜ್ಯ ಶ್ರೀ ಮ.ನಿ.ಪ್ರ. ಶಾಂತಲಿಂಗ ಮಹಾಸ್ವಾಮಿಗಳು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಜಿ–ಎನ್.ಟಿ.ಟಿ.ಎಫ್ ಚೇರಮನ್ ಕೃಷ್ಣಗೌಡ ಎಚ್.ಪಾಟೀಲ, ಖ್ಯಾತ ಉದ್ದಿಮೆದಾರರಾದ ಪ್ರಸಾದ, ಕರ್ನಾಟಕ ರಾಜ್ಯ ಕುಸ್ತಿ ಸಂಘದ ಉಪಾಧ್ಯಕ್ಷ ಪ್ರಶಾಂತ ಶೆಟ್ಟಿ,




ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಆನಂದಸ್ವಾಮಿ ಗಡ್ಡದೇವರಮಠ, ಅನಿಲ ಪಾಟೀಲ, ವಿವೇಕ ಯಾವಗಲ್ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಪ್ರಧಾನ ಕಾರ್ಯದರ್ಶಿ ಮಂಜುನಾಥ ಬ.ಬೆಳಧಡಿ ವಹಿಸಿಕೊಂಡಿದ್ದರು.

ಸ್ಪರ್ಧೆಯಲ್ಲಿ ದಾವಣಗೇರಿಯ ಸುಶೀಲಕುಮಾರ ವಿಜೇತರಾಗಿ 25 ಸಾವಿರ ರೂ.ಗಳ ನಗದು ಬಹುಮಾನ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ಅನಿಲ ಬೆಳವಣಕಿ, ದೇವು ವಡೆಮ್ಮನವರ, ಪ್ರಶಾಂತ ಚೌಡಿ, ಚಂದ್ರು ಉಚ್ಚಯ್ಯನಮಠ, ಕಾರ್ತಿಕ ಕೆಂದೂರ, ಸುನಿಲ ಜಡಿ, ರಾಜು, ಸೊಹೆಲ್, ಪ್ರಸನ್, ಪುನೀತ, ಶಿವು, ಆದಿತ್ಯಾ ಮುಂತಾದವರು ಭಾಗವಹಿಸಿದ್ದರು.

## ಮೈಕ್ರೋ ಫೈನಾನ್ಸ್ ಕಿರುಕುಳ: ಕೂಡಲೇ ಸುಗ್ರಿವಾಜ್ಞೆ ಫೈನಲ್ : ಸಚಿವ ಪರಮೇಶ್ವರ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿಎಂ ಸಹಿ ಆದ ಕೂಡಲೇ ಸುಗ್ರಿವಾಜ್ಞೆ ಫೈನಲ್ ಆಗಲಿದೆ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಕರಡು ಬಿಲ್ ಸಿಎಂ ನೋಡಬೇಕು.

ಅವರು ನೋಡಿ ಸಹಿ ಹಾಕಬೇಕು. ಅವರು ಸಹಿ ಮಾಡಿ ಡ್ರಾಫ್ಟ್ ಕಳುಹಿಸುತ್ತಾರೆ. ಅದಾದ ಮೇಲೆ ಸುಗ್ರಿವಾಜ್ಞೆ ಜಾರಿ ಆಗುತ್ತದೆ ಎಂದರು.

ಈಗ ಇರೋ ಕಾನೂನಿಗೆ ಕೆಲವು ಕಾನೂನುಗಳನ್ನು ಸೇರಿಸೋ ಬಗ್ಗೆ ಚರ್ಚೆ ಆಗಿದೆ.

ಹೊಸ ಕಾನೂನುಗಳನ್ನು ಸೇರ್ಪಡೆ ಮಾಡಿದ್ದೇವೆ. ಕರಡು ಪ್ರತಿ ನಾನು ನೋಡಿಲ್ಲ. ಸಿಎಂ ಸಹಿ ಆದ ಕೂಡಲೇ ಸುಗ್ರಿವಾಜ್ಞೆ ಫೈನಲ್ ಆಗಲಿದೆ ಎಂದು ತಿಳಿಸಿದರು.

### ಮಣಿಪುರ ಹಿಂಸಾಚಾರದಲ್ಲಿ ಬಿರೇನ್ ಸಿಂಗ್ ಪಾತ್ರವಿದೆ ಎಂಬ ಆಡಿಯೋ ವೈರಲ್

# ಎಫ್‌ಎಸ್‌ಎಲ್‌ನಿಂದ ವರದಿ ಕೇಳಿದ ಸುಪ್ರೀಂ ಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ಮಣಿಪುರ ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ಅವರು ರಾಜ್ಯದಲ್ಲಿ ನಡೆಯುತ್ತಿರುವ ಜನಾಂಗೀಯ ಹಿಂಸಾಚಾರದಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸುವ ಸೋರಿಕೆಯಾದ ಆಡಿಯೋ ಟೇಪ್‌ಗಳ ಕುರಿತು ಸುಪ್ರೀಂ ಕೋರ್ಟ್ ಸೋಮವಾರ ವಿಧಿವಿಜ್ಞಾನ ಪ್ರಯೋಗಾಲಯದಿಂದ (ಎಫ್‌ಎಸ್ ಎಲ್) ವರದಿ ಕೋರಿದೆ.

ಈ ಹಿಂಸಾಚಾರವು ಮೇ 2023 ರಲ್ಲಿ ಮೊದಲ ಬಾರಿಗೆ ಭುಗಿಲೆದ್ದ ನಂತರ 200 ಕ್ಕೂ ಹೆಚ್ಚು ಜನರನ್ನು ಬಲಿ ತೆಗೆದು–ಕೊಂಡಿದೆ; ಸಾವಿರಾರು ಜನರನ್ನು ನಿರಾಶ್ರಿತರನ್ನಾಗಿ ಮಾಡಿದೆ.


ಕರ್ನಾಟಕ ಸರ್ಕಾರ

**ಜಿಲ್ಲಾ ಪಂಚಾಯತ ಗದಗ**

**ತಾಲೂಕ ಪಂಚಾಯತ ರೋಣ**

**ಗ್ರಾಮ ಪಂಚಾಯತ ಕಾರ್ಯಾಲಯ, ಸವಡಿ**

ಕ್ರ.ಸಂ:ಗ್ರಾ.ಪಂ.ಸ/ನರೇಗಾ/ದ.ಪ.ಪ್ರ/2024–25 ದಿನಾಂಕ: 01.02.2025

**: ದರಪಟ್ಟಿ ಪ್ರಕಟಣೆ :**

2024–2025 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿದ ರೀತಿಯ ಸಾಮಗ್ರಿಗಳನ್ನು ಸಂಗ್ರಹಿಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ. | ಕಾಮಗಾರಿಯ ಹೆಸರು | ಕಾಮಗಾರಿಯ ಅಂದಾಜು ಮೊತ್ತ | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ |
|---|---|---|---|
| 01 | ಸವಡಿ ಗ್ರಾಮದ 1ನೇ ವಾ ರ್ಡಿನ ಅಬ್ಬಿಗೇರಿ ರಸ್ತೆಯ ಹತ್ತಿರ ವಿಶ್ವನಾಥ ಹಿರೇಮಠ ಇವರ ಮನೆಗೆ ಹೋಗುವ ರಸ್ತೆಗೆ ಸಿ ಡಿ ನಿರ್ಮಾಣ | 100000.00 | 60000.00 |
| 02 | ಸವಡಿ ಗ್ರಾಮದ 6ನೇ ವಾರ್ಡಿನ ಯಲ್ಲಪ್ಪ ಕಂಬಳಿ ಇವರ ಮನೆಯ ಮುಂದೆ ಸಿಡಿ ನಿರ್ಮಾಣ | 100000.00 | 65600.00 |
| 03 | ಸವಡಿ ಗ್ರಾಮದ 3ನೇ ವಾರ್ಡಿನ ಗದಗ ಮೇನ್ ರಸ್ತೆಯಿಂದ ಡಾ: ಹೂಗಾರ ಮನೆಯವರೆಗೆ ಗಟಾರ ನಿರ್ಮಾಣ | 100000.00 | 56500.00 |
| 04 | ಸವಡಿ ಗ್ರಾಮದ 3ನೇ ವಾರ್ಡಿನ ಹನಮಂತ ಹೂಗಾರ ಶೆಡ್ ನಿಂದ ಕುಲಕರ್ಣಿ ಇವರ ಹಿತ್ತಲದವರೆಗೆ ಗಟಾರ ನಿರ್ಮಾಣ | 100000.00 | 56500.00 |
| 05 | ಸವಡಿ ಗ್ರಾಮದ 3ನೇ ವಾರ್ಡಿನ ಬಸವರಾಜ ಮಣ್ಣೂರ ಇವರ ಮನೆಯಿಂದ ಶಿವಪೂಜಿ ಇವರ ಮನೆಯವರೆಗೆ ಗಟಾರ ನಿರ್ಮಾಣ | 100000.00 | 56500.00 |
| 06 | ಸವಡಿ ಗ್ರಾಮದ 6ನೇ ವಾರ್ಡಿನ ಅವ್ವಣವ್ವರ ಮನೆ ಹತ್ತಿರ ಸಿ ಡಿ ನಿರ್ಮಾಣ | 100000.00 | 66600.00 |
| 07 | ಹೊನ್ನಾಪೂರ ಗ್ರಾಮದ ಹುಲಗೊರ ಪ್ಲಾಟಿನಲ್ಲಿ ಗಟಾರ ನಿರ್ಮಾಣ | 100000.00 | 60000.00 |
| 08 | ಸವಡಿ ಗ್ರಾಮದ 5ನೇ ವಾರ್ಡಿನ ಹನಮಂತಪ್ಪ ಹಕ್ಕಿ ಇವರ ಮನೆ ಮುಂದೆ ಪೂರ್ವ ದಿಕ್ಕಗೆ ಗಟಾರ ನಿರ್ಮಾಣ | 300000.00 | 182700.00 |
| 09 | ಸವಡಿ ಗ್ರಾಮದ 6ನೇ ವಾರ್ಡಿನ ಫಕೀರಪ್ಪ ಭಜಂತ್ರಿ ಅವರ ಮನೆಯಿಂದ ಮೇನ ರಸ್ತೆಯವರೆಗೆ ಮೊರಮ ರಸ್ತೆ ನಿರ್ಮಾಣ | 100000.00 | 66500.00 |
| 10 | ಸವಡಿ ಗ್ರಾಮದ 6ನ ಬಸವರಾಜ ಗೊಳೆದ ಇವರ ಮನೆಯಿಂದ ಫಕೀರಪ್ಪ ಭಜಂತ್ರಿ ಸಿ ಸಿ ರಸ್ತೆ ನಿರ್ಮಾಣ | 100000.00 | 64700.00 |
| 11 | ಸವಡಿ ಗ್ರಾಮದ ಗೊಂದಲಗೇರಿ ಸಮಾಜದ ಜಗದೀಶ ಇವರ ಮನೆ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 230000.00 | 149200.00 |
| 12 | ಸವಡಿ ಗ್ರಾಮದ 1ನೇ ವಾರ್ಡಿನ ರಾಮಣ್ಣ ತೋಟದ ಮನೆಯಿಂದ ಶರಣಪ್ಪ ದೊಡ್ಡಣವ್ವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 150000.00 | 101500.00 |
| 13 | ಸವಡಿ ಗ್ರಾಮದ 1ನೇ ವಾರ್ಡಿನ ಕುಂಬಾರ ಮನೆಯಿಂದ ಮೇನ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 150000.00 | 101500.00 |
| 14 | ಹೊನ್ನಾಪೂರ ಗ್ರಾಮದ ಈರಪ್ಪ ಕಿಂದ್ರಿಯವರ ಪ್ಲಾಟದಿಂದ ಪೂರ್ವ ದಿಕ್ಕಿಗೆ ರಸ್ತೆ ಸುಧಾರಣೆ | 100000.00 | 65000.00 |
| 15 | ಹೊನ್ನಾಪೂರ ಗ್ರಾಮದ ಹಿರೇಹಳ್ಳದ ಹತ್ತಿರ ರಸ್ತೆ ಸುಧಾರಣೆ | 100000.00 | 67400.00 |
| 16 | ಸವಡಿ ಗ್ರಾಮದ 3ನೇ ವಾರ್ಡಿನ ಮಸೀದಿಯಿಂದ ಮೇನ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 100000.00 | 66500.00 |
| 17 | ಸವಡಿ ಗ್ರಾಮದ ಜಂಗಮದಾರಿ ರಸ್ತೆ ಸುಧಾರಣೆ | 100000.00 | 80000.00 |
| 18 | ಸವಡಿ ಗ್ರಾಮದ 2ನೇ ವಾರ್ಡಿನ ಸಂಗಪ್ಪ ಕರಡಿ ಇವರ ಮನೆಯಿಂಧ ಮೇನ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 200000.00 | 136000.00 |

- ದರಪಟ್ಟಿ ಅವಧಿ 04–02–2025 ರಿಂದ 12–02–2025 ರವರೆಗೆ
- ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 13–02–2025 ಮಧ್ಯಾಹ್ನ 12.30 ಘಂಟೆಯವರೆಗೆ.
- ದರಪಟ್ಟಿ ತೆರೆಯುವ ದಿನಾಂಕ 13–02–2025 ಮಧ್ಯಾಹ್ನ 12.30 ಘಂಟೆಯ ನಂತರ.
- ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
- ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್‌ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
- ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ ಆಗಿದೆ/–
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಸವಡಿ**

ಸಹಿ ಆಗಿದೆ/–
**ಅಧ್ಯಕ್ಷರು**
**ಗ್ರಾಮ ಪಂಚಾಯತಿ ಸವಡಿ**


# ಕ್ರೀಡಾ ಇಲಾಖೆಯ ಸೌಲಭ್ಯ ವೀಕ್ಷಿಸಿದ ಸಚಿವ ಜಾರಕಿಹೊಳಿ



■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಗರದ ಕೆ. ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣ, ಕುಸ್ತಿ ಮನೆ, ಕಳಸಾಪೂರ ರಸ್ತೆಯ ಒಳಾಂಗಣ. ಕ್ರೀಡಾಂಗಣ, ನಂದೀಶ್ವರ ನಗರದ ಈಜುಕೋಳ, ಬೆಟಗೇರಿಯ ಮಹಾತ್ಮಗಾಂಧಿ ಹಾಕಿ ಕ್ರೀಡಾಂಗಣಗಳಿಗೆ ಸೋಮವಾರ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಗದುಗಿನಲ್ಲಿರುವ ಕ್ರೀಡಾ ಸೌಲಭ್ಯ ಗಳು ಗುಣಮಟ್ಟ ದಿಂದ ಕೂಡಿದ್ದು ಮಾದರಿಯಾಗಿವೆ ಎಂದು ಶ್ಲಾಘಿಸಿದರು.

ಈ ಸಂಧರ್ಭದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷರಾದ ಬಿ.ಬಿ.ಅಸೂಟಿ, ತಾಲೂಕು ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷರಾದ ಅಶೋಕ ಮಂದಾಲಿ, ತಾಲೂಕು ಗ್ಯಾರಂಟಿ ಯೋಜನಾ ಸಮಿತಿಯ ಸದಸ್ಯರಾದ ಕೃಷ್ಣಗೌಡ ಎಚ್ ಪಾಟೀಲ್, ಗಣ್ಯರಾದ ಸಿದ್ದು ಪಾಟೀಲ್, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸೇರಿದಂತೆ ಗಣ್ಯರು, ಕ್ರೀಡಾಪಟುಗಳು ಹಾಜರಿದ್ದರು.

# ಗದಗ–ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ:04ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ**: ವಾರ್ಡ್ ನಂ.29 – ಪರಶುರವರ ಲೈನ್, ಬನ್ನಿಕಟ್ಟಿ, ಪಾಪಡೆಯವರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 3 – ರಾಜಾಜಿ ರಸ್ತೆ, ಹುಯಿಲಗೋಳ ರಸ್ತೆ ಎಡಭಾಗದ ಪೂರ್ತಿ ಭಾಗಗಳು, ಬಣ್ಣದ ನಗರ, ಕುಂಬಾರ ಓಣಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ದೇವಗಿರಿ ಸರ ಲೈನ್, ಅನ್ನಪೂರ್ಣ ಅಪಾರ್ಟ್ಮೆಂಟ್, ಸಂತೋಷ ಕಿರಾಣಿ ಅಂಗಡಿ, ಕೊರ್ಲಹಳ್ಳಿ ಮಾಸ್ತರ್ ಲೈನ್, ಕಾಗದಗಾರ ಲೈನ್, ಅಬ್ಬಿಗೇರಿ ಲೈನ್, ಗವಾಯಿಗಳ ಆಶ್ರಮ, ಕೃಷ್ಣ ಟ್ಯೂಷನ್, ಸೊಲ್ಲಾಪಟ್ಟಿ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 27, 30 – ಟಿ ವಿ ಎಸ್ ಶೋ ರೂಮ್, ಪೊಲೀಸ್ ಕ್ವಾರ್ಟರ್ಸ್, ಮುತ್ತಿನ ಪೆಂಡಿಯವರ ಲೈನ್, ಎಸ್ ಪಿ ಆಫೀಸ್, ರೋಣದವರ ಲೈನ್, ಕೇಶವ ನಗರ, ಸಂಕಣ್ಣವರ ಲೇಔಟ್ ವಾರ್ಡ್ ನಂ. 7 – ಶಿವಾಜಿನಗರ 4 ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 – ಪಂಚಾಕ್ಷರಿ ನಗರ 4 ಮತ್ತು 6ನೇ ಕ್ರಾಸ್ ಗಳು. ವಾರ್ಡ್ ನಂ. 33 – ಬ್ಯಾಂಕರ್ಸ್ ಕಾಲೋನಿ, ಹುಬ್ಬಳ್ಳಿ ರಸ್ತೆ, ಗಡ್ಡಿಯವರ ಬಂಕ್ ಹಿಂದಿನ ಭಾಗ, ಕೇಶವ ನಗರ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ಅಮರೇಶ್ವರ ನಗರ, ತಾಜನಗರ ಉಳಿದ ಕೆಲವು ಭಾಗಗಳು.

**ಪ್ರಕಟಣೆ**: ಗದಗ–ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

ಕವನ

## ಏಕಾಂಗಿ




ಈ ಪ್ರಪಂಚ ಕಣ್ಣು ತೆರೆದು
ನಾ ನೋಡಿದಾಗಿನಿಂದ ಇವತ್ತಿನವರೆಗೂ ಭಯ
ಈ ಏಕಾಂಗಿ ಜೀವನ
ಭಯವಾಯಿತು ಜೀವನ
ನಾ ಕಣ್ಣು ತೆರೆದು ನೋಡಿದಾಗ
ಈ ಪ್ರಪಂಚ ನೋಡಿ ಭಯವಾಯಿತು
ಹಿಂದೆ-ಮುಂದೆ ಯಾರಂತ ತಿಳಿಯದೆ
ಈ ಏಕಾಂಗಿ ಜೀವನ
ನನ್ನವರು ಯಾರು
ನಾನು ಯಾರು
ತಿಳಿಯದೇ ಹೋಯಿತು ಜೀವನ
ಆಶ್ರಮ ಅನಾಥಾಶ್ರಮ ಇದ್ದರೂ
ರಸ್ತೆ ಬೀದಿಗಳಲ್ಲಿ ನಡೆಯಿತು ಬಾಳು
ನಮ್ಮ ಕಥೆ ಕೇಲವರಿಲ್ಲ ಯಾರು
ಜೀವನದ ದಾರಿ ನೆನೆದು
ಮುಂದೆ ಸಾಗುವುದು ಹೇಗೋ
ಈ ಏಕಾಂಗಿಯ ಬದುಕಿನಲ್ಲಿ
ಆ ದಿನಗಳು ನೆನದರೆ
ಮೈ ರೋಮಂಚನವಾಗುವುದು
ದಿನ ವರ್ಷಗಳು ಹೋಗಿದ್ದೇ ಗೊತ್ತಾಗಲಿಲ್ಲ
ಎಲ್ಲರನ್ನೂ ನೋಡಿ ಭಯವಾದೆ
ನನ್ನ ಹಿಂದೆ-ಮುಂದೆ ಯಾರಿಲ್ಲವೆಂದು
ದಾರಿ ಉದ್ದಕ್ಕೂ ನನ್ನ ಪ್ರಯಾಣ
ದೇವಸ್ಥಾನಗಳ ಸುತ್ತಮುತ್ತ ನನ್ನ ಬದುಕು
ದೇವರ ಗುಡಿಗೆ ಬರುವರೇ ನನ್ನ ಬಂಧು-ಬಳಗ
ತಂಪಾದ ಗಾಳಿ ಬೇವಿನ ಮರದ ಕೆಳಗೆ
ಭಕ್ತಿಗೀತೆಗಳ ಹಾಡಿನ ಸಂಗೀತದಲ್ಲಿ
ಇಂದು ನಾಳೆ ನಾಳೆದೆಂದು ಪ್ರಯಾಣದಲ್ಲಿ
ಹಬ್ಬ ಜಾತ್ರೆ ದಿನಗಳಲ್ಲಿ ನನಗೂ ಹಬ್ಬ ಇಲ್ಲಿ
ಚಿಲ್ಲರೆ ನಾಣ್ಯಗಳು ಹಾಕುವರು ಇಲ್ಲಿ
ಆ ದೇವರ ಮಗನು ನಾ ಇಲ್ಲಿ.



– ವಿ.ಎಂ.ಎಸ್. ಗೋಪಿ.
ಲೇಖಕರು, ಬೆಂಗಳೂರು.

## ಜಿಮ್ಸ್ ಆಸ್ಪತ್ರೆ ಶ್ರೇಷ್ಠ ಸೇವೆ ನೀಡಲಿ

▶▶ ಮೊದಲನೇ ಪುಟದಿಂದ

ಜಿಮ್ಸ್ ಬಿ.ಎಸ್.ಇ ನರ್ಸಿಂಗ್ ವಿದ್ಯಾರ್ಥಿಗಳು 'ನಿಮ್ಮ ಹೃದಯ ನಿಮ್ಮ ಕೈಯಲ್ಲಿ' ಎಂಬ ಕಿರುನಾಟಕ ಪ್ರದರ್ಶಿಸಿ, ನಾಟಕದಲ್ಲಿ ಧೂಮಪಾನ, ಮದ್ಯಪಾನ, ಜಂಕ್ ಫುಡ್, ಗುಟಕಾ ಜಗಿಯುವದು ಆರೋಗ್ಯಕ್ಕೆ ಹಾನಿಕರ, ಇದರಿಂದ ನಿಮ್ಮ ಜೀವನವೇ ಸರ್ವನಾಶ ಆಗಬಹುದು ಎಂಬ ಸಂದೇಶ ಜನಸಾಮಾನ್ಯರಿಗೆ ತಲುಪಿಸುವಲ್ಲಿ ಯಶಸ್ವಿಯಾದರು.

ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರ್‌ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಸುಂಡಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ್ ಕಾಗದಗಾರ, ಗ್ಯಾರಂಟಿ ಸಮಿತಿಯ ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಮ್ಸ್ ವೈದ್ಯಕೀಯ ಅಧೀಕ್ಷಕರಾದ ಡಾ. ರೇಖಾ ಎಸ್.ಸೋನಾವನೆ, ಪ್ರಾಂಶುಪಾಲ ಡಾ. ರಾಜು ಜಿ.ಎಮ್, ಆರ್ಥಿಕ ಸಲಹೆಗಾರ ಪ್ರಶಾಂತ ಜೆ.ಸಿ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ ಹಾಜರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಜಾತ್ರಾ ಸಮಿತಿ ಅಧ್ಯಕ್ಷ ಕೆ.ಎಲ್. ಕರಿಗೌಡ್ರ ಮಾಹಿತಿ

# ಫೆ. 9ರಿಂದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಜಾತ್ರೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶರಣ ಸಂಸ್ಕೃತಿಯ ಪಾವನ ತಾಣ ಬಾಲಲೀಲಾ ಮಹಾಂತ ಶಿವಯೋಗಿಗಳ 166ನೇ ಜಾತ್ರಾ ಮಹೋತ್ಸವದ ಷಟ್‌ಸ್ಥಲ ಧ್ವಜಾರೋಹಣವು ಫೆ.9ರಂದು ಬೆಳಿಗ್ಗೆ 9 ಗಂಟೆಗೆ ಅಗಡಿ ಹಾಗೂ ಗುತ್ತಲಪ್ರಭುಸ್ವಾಮಿಮಠದ ಗುರುಸಿದ್ಧ ಮಾಹಾಸ್ವಾಮಿಗಳ ಲಿಂಗ ಹಸ್ತದಿಂದ ಜರಗುವುದು. ಷಟ್‌ಸ್ಥಲ ನುಡಿ ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಸಮ್ಮುಖವನ್ನು ಕೆರೂರ ವಿರಕ್ತಮಠದ ವಿಜಯಮಾಹಾಂತ ದೇವರು ವಹಿಸುವರು ಎಂದು ಜಾತ್ರಾ ಸಮಿತಿ ಅಧ್ಯಕ್ಷ ಕೆ.ಎಲ್. ಕರಿಗೌಡ್ರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

10 ಗಂಟೆಗೆ ಕಲ್ಮಠ ಆವರಣದಲ್ಲಿ ನೂತನವಾಗಿ ನಿರ್ಮಾಣವಾದ ವಾಣಿಜ್ಯ ಸಂಕೀರ್ಣ ಉದ್ಘಾಟನೆಯನ್ನು ಗವಿಮಠದ ಜಯವಿಭವ ಮುರುಘರಾಜೇಂದ್ರ ಶ್ರೀಗಳು ನೆರವೇರಿಸುವರು. ಸಾಯಂಕಾಲ 7 ಗಂಟೆಗೆ ಅನುಭವ ಗೋಷ್ಠಿ-1ರ ಸಾನ್ನಿಧ್ಯವನ್ನು ಹೊಸಳ್ಳಿ ಬೂದೀಶ್ವರಮಠದ ಡಾ.ಅಭಿನವ ಬೂದೀಶ್ವರ ಮಾಹಾಸ್ವಾಮಿಗಳು, ಸಮ್ಮುಖವನ್ನು ಸವಣೂರ ದೊಡ್ಡ ಹುಣಸೆಕಲ್ಮಠದ ಚನ್ನಬಸವ ಮಾಹಾಸ್ವಾಮಿಗಳು, ಗದಗ-ರಾಜೂರ ಬೃಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಾಹಾಸ್ವಾಮೀಜಿ ವಹಿಸುವರು.

ಕಾರ್ಯಕ್ರಮ ಉದ್ಘಾಟನೆಯನ್ನು ನಿವೃತ್ತ ಡಿಜಿಪಿ, ಐಜಿಪಿ ಶಂಕರ ಬಿದರಿ ನೆರವೇರಿಸುವರು. ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿಗಳ ಸೇವಾ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ, ಮುಖ್ಯ



ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ, ಗದಗ-ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಈಶಣ್ಣಾ ಮುನವಳ್ಳಿ, ಪ.ಪಂ ಉಪಾಧ್ಯಕ್ಷೆ ಅನಸೂಯಾ ಸೋಮಗೇರಿ, ಗೌರಮ್ಮಾ ಬಡ್ನಿ ಆಗಮಿಸುವರು. ಉಪನ್ಯಾಸಕರಾಗಿ ಡಾ. ಎ.ಸಿ. ವಾಲಿ ಮಹಾರಾಜರು, ವಚನ ಸಂಗೀತವನ್ನು ಮೃತ್ಯುಂಜಯ ಹಿರೇಮಠ, ವಿಜಯಲಕ್ಷ್ಮಿ ಹಿರೇಮಠ, ಮುಳಗುಂದ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರತಿ ಕಲ್ಯಾಣ ಮುಡಲಪಾಯ ದೊಡ್ಡಾಟ ಶಿತಾಲಹರಿ ಗ್ರಾಮದ ಹೊನ್ನಮ್ಮದೇವಿ ದೊಡ್ಡಾಟ ಸಂಘದವರಿಂದ ಜರಗುವುದು.

ಫೆ.10ರಂದು ಸಾಯಂಕಾಲ 5 ಗಂಟೆಗೆ ರಥೋತ್ಸವ ಜರಗುವುದು. ಸಾಯಂಕಾಲ 7 ಗಂಟೆಗೆ ಅನುಭವ ಗೋಷ್ಠಿ-2ರ ಸಾನ್ನಿಧ್ಯವನ್ನು ಹಾವೇರಿ-ಹುಕ್ಕೇರಿಮಠದ ಸದಾಶಿವ ಮಾಹಾಸ್ವಾಮಿಗಳು, ಸಮ್ಮುಖವನ್ನು ಬಳಗಾನೂರ ಚಿಕ್ಕೇನಕೊಪ್ಪ ಚನ್ನವೀರ ಶರಣರಮಠದ ಶಿವಶಾಂತವೀರ ಶರಣರು, ಮುಖ್ಯ ಅತಿಥಿಗಳಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ, ಮಾಜಿ ಸಚಿವ ಎಸ್.ಎಸ್. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಅರ್ಬನ್ ಬ್ಯಾಂಕ್ ಅಧ್ಯಕ್ಷ ಎಸ್.ಎಂ. ನೀಲಗುಂದ ಪಾಲ್ಗೊಳ್ಳುವರು.

ಗೋಕಾಕ ಬಸವಬೆಳವಿ ಶರಣಬಸವ ದೇವರಿಂದ ಕೈವಲ್ಯ ದರ್ಪಣ ಕುರಿತ ಉಪನ್ಯಾಸ, ಗದಗ ಅರ್ಚನಾ, ವಿಜಯಕುಮಾರ, ಪ್ರಸಾದ ಸುತಾರ ಇವರಿಂದ ವಚನ ಸಂಗೀತ, ಕೊತಬಾಳದ ಜೀವನ ಬೆಳಕು ಜನಪದ ಕಲಾ ತಂಡ ಹಾಗೂ ರಾಜಶೇಖರ ಹಿರೇಮಠರಿಂದ ಜಾನಪದ ಸಂಜೆ ಜರುಗುವುದು ಎಂದು ಮಾಹಿತಿ ನೀಡಿದರು.

ಫೆ.11ರಂದು ಸಾಯಂಕಾಲ 4 ಗಂಟೆಗೆ ಕಡುಬಿನ ಕಾಳಗ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳಿಂದ ಜರುಗುವುದು. ಸಾಯಂಕಾಲ 7 ಗಂಟೆಗೆ ಅನುಭಾವ ಗೋಷ್ಠಿ-3ರ ಪಾವನ ಸಾನ್ನಿಧ್ಯವನ್ನು ಹೊಸದುರ್ಗದ ಸಾಣೇಹಳ್ಳಿಯ ತರಳಬಾಳು ಜಗದ್ಗುರು ಶಾಖಾಮಠದ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಮಾಹಾಸ್ವಾಮಿಗಳು, ಸಾನ್ನಿಧ್ಯವನ್ನು ಚಿತ್ರದುರ್ಗದ ಮುರುಘರಾಜೇಂದ್ರ ವಿದ್ಯಾಪೀಠದ ಬಸವಕುಮಾರ ಮಾಹಾಸ್ವಾಮಿಗಳು, ಸಮ್ಮುಖವನ್ನು ಹೂವಿನ ಶಿಗ್ಲಿ ವೀರಕ್ತಮಠದ ಚನ್ನವೀರ ಮಾಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಸಲಿಂ ಅಹ್ಮದ್, ಡಾ. ವೀರೇಶ ಹಂಚಿನಾಳ, ಆನಂದ ಗಡ್ಡದೇವರಮಠ, ಡಾ. ಎಸ್.ಸಿ. ಚವಡಿ, ಇಮಾಮಸಾಬ ಶೇಖ, ಉಪನ್ಯಾಸಕರಾಗಿ ಹುಬ್ಬಳ್ಳಿಯ ದ್ರಾಕ್ಷಾಯಣಿ ಕೋಳಿವಾಡ ಪಾಲ್ಗೊಳ್ಳುವರು. ಕಲಾವಿದ ರಮೇಶ ಲಮಾಣಿ, ಹುಬ್ಬಳ್ಳಿಯ ಶರಣು ಯಮನೂರ ಇವರಿಂದ ಮನರಂಜನಾ ಕಾರ್ಯಕ್ರಮ ಜರುಗುವುದು ಎಂದು ಕೆ.ಎಲ್. ಕರಿಗೌಡ್ರ ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಎಂ.ಡಿ. ಬಟ್ಟೂರ, ಅಶೋಕ ಸೋನಗೋಜಿ, ಡಾ. ಎಸ್.ಸಿ. ಚವಡಿ, ಬಸವರಾಜ ಸುಂಕಾಪೂರ, ಎಸ್.ಸಿ. ಬಡ್ನಿ, ಹೊನ್ನಪ್ಪ ನೀಲಗುಂದ, ಸಿದ್ದಲಿಂಗೇಶ ಕುರ್ತಕೋಟಿ ಇದ್ದರು.

# ನೇಹಾ ಕೊಲೆ ಹಿಂದೆ ಶಾಸಕರ ಕೈವಾಡವಿದೆ: ತಂದೆ ನಿರಂಜನ್ ಹಿರೇಮಠ ಆರೋಪ!

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನನ್ನ ಮಗಳ ಕೊಲೆ ಹಿಂದೆ ಶಾಸಕರ ಕೈವಾಡವಿದೆ ಎಂದು ನೇಹಾ ತಂದೆ ನಿರಂಜನ್ ಹಿರೇಮಠ ಆರೋಪ ಮಾಡಿದ್ದಾರೆ.

ಕಳೆದ ವರ್ಷ ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದ್ದ ನೇಹಾ ಹಿರೇಮಠ ಕೊಲೆ ಪ್ರಕರಣ ಇದೀಗ ಮತ್ತೆ ಮುನ್ನೆಲೆಗೆ ಬಂದಿದೆ. ಈ ಬಗ್ಗೆ ಮಾತನಾಡಿದ ತಂದೆ ನಿರಂಜನ್ ಹಿರೇಮಠ, ನೇಹಾ ಹಿರೇಮಠ ಹಂತಕನಿಗೆ ಶಿಕ್ಷೆಯಾಗಿಲ್ಲ. 120 ದಿನಗಳಲ್ಲಿ ನೇಹಾಳ ಸಾವಿಗೆ ನ್ಯಾಯ ಕೊಡಿಸುವ ಭರವಸೆಯನ್ನು ರಾಜ್ಯ ಸರ್ಕಾರ ನೀಡಿತ್ತು. ಆದರೆ, ಇನ್ನೂವರೆಗೂ





ನ್ಯಾಯ ದೊರೆತಿಲ್ಲ. ನೇಹಾ ಕೊಲೆ ಹಿಂದೆ ಶಾಸಕರ ಕೈವಾಡವಿದೆ. ಈ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು. ನನ್ನ ಮಗಳ ಆತ್ಮಕ್ಕೆ ಶಾಂತಿ ಸಿಗಬೇಕು ಎಂದು ಆಗ್ರಹಿಸಿದ್ದಾರೆ.

ನನ್ನ ಮಗಳ ಹತ್ಯೆ ನಡೆದು 9 ತಿಂಗಳು ಕಳೆದರೂ ನ್ಯಾಯ ಸಿಗುತ್ತಿಲ್ಲ. ಈ ತನಿಖೆಯ ಹಾದಿ ಎತ್ತ ಸಾಗುತ್ತಿದೆ ಅನ್ನೋದೇ ಗೊತ್ತಾಗುತ್ತಿಲ್ಲ. ಹತ್ಯೆ ಪ್ರಕರಣವನ್ನ ಸಿಬಿಐಗೆ ವಹಿಸಬೇಕೆಂದು ಶ್ರೀರಾಮಸೇನೆ ಮುಖ್ಯಸ್ಥ ಪ್ರಮೋದ ಮುತಾಲಿಕ್ ಆಗ್ರಹಿಸಿದ್ದಾರೆ. ಈ ಪ್ರಕರಣದ ತನಿಖೆಯ ಬಗ್ಗೆ ಶ್ರೀರಾಮಸೇನೆ ಅಷ್ಟೇ ಅಲ್ದೇ ಸಾರ್ವಜನಿಕರಲ್ಲಿಯೂ ಹಲವು ಪ್ರಶ್ನೆ ಮೂಡಿಸಿದೆ. ಆದ್ದರಿಂದ ಸಿಬಿಐ ತನಿಖೆ ಆಗಲಿ ಎಂದಿದ್ದಾರೆ. ಕೊಲೆ ಕೇಸ್ ನಲ್ಲಿ ಶಾಸಕರ ಕೈವಾಡ ಇರುವುದು ಸತ್ಯ ಎಂದು ಕಣ್ಣೀರು ಹಾಕಿದ್ದಾರೆ.

**ಘಟನೆ ಹಿನ್ನೆಲೆ:-** 2024ರ ಎಪ್ರಿಲ್ 18 ರಂದು ಹುಬ್ಬಳ್ಳಿಯ ವಿದ್ಯಾನಗರದ ಬಿವಿಬಿ ಇಂಜಿನಿಯರಿಂಗ್ ಕಾಲೇಜ್‌ನಲ್ಲಿ ವಿದ್ಯಾರ್ಥಿನಿ ನೇಹಾಳ ಕೊಲೆಯಾಗಿತ್ತು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯ ಮತ್ತು ಕಾಂಗ್ರೆಸ್ ಮುಖಂಡ ನಿರಂಜನ ಹಿರೇಮಠ ಅವರ ಮಗಳು ನೇಹಾಳನ್ನ ಬರ್ಬರವಾಗಿ ಕೊಲೆ ಮಾಡಲಾಗಿತ್ತು. ಪ್ರೀತಿ ನಿರಾಕರಿಸಿದ್ದಕ್ಕೆ ಆರೋಪಿ ಫಯಾಜ್ ನೇಹಾಳನ್ನು ಕೊಲೆ ಮಾಡಿದ್ದನು. ಕೊಲೆ ಮಾಡುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಕೊಲೆ ಆರೋಪಿ ಫಯಾಜ್‌ನನ್ನು ಕೆಲವೇ ಕ್ಷಣಗಳಲ್ಲಿ ಪೊಲೀಸರು ಬಂಧಿಸಿದ್ದರು.

# ನೂತನ ಎಸ್‌ಡಿಎಂಸಿ ರಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಅಡವಿಸೋಮಾಪೂರ ಸಣ್ಣ ತಾಂಡೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ನೂತನ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರಾಗಿ ಪಾರವ್ವ ಉಮೇಶ ಲಮಾಣಿ, ಉಪಾಧ್ಯಕ್ಷರಾಗಿ ಮಂಜಪ್ಪ ಲಕ್ಷ್ಮಣ ರಜಪೂತ ಹಾಗೂ ಸದಸ್ಯರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.



ಆಯ್ಕೆಯಾದ ಸರ್ವ ಸದಸ್ಯರಿಗೆ ಶಾಲೆಯ ಪರವಾಗಿ ಅಭಿನಂದನೆ ಸಲ್ಲಿಸಲಾಯಿತು. ಮುಖ್ಯಶಿಕ್ಷಕ ಮಲ್ಲೇಶ ಡಿ.ಎಚ್ ಮಾತನಾಡಿ ಎಸ್‌ಡಿಎಂಸಿಯ ಕಾರ್ಯ ಚಟುವಟಿಕೆಗಳ ಬಗ್ಗೆ ವಿವರಿಸಿದರು. ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಶಾಲಾ ಮೇಲುಸ್ತುವಾರಿ ಸಮಿತಿಯ ನಿಕಟಪೂರ್ವ ಅಧ್ಯಕ್ಷ ಮಾರುತಿ ಪವಾರ, ಹನುಮಂತ ಲಮಾಣಿ, ವೆಂಕಟೇಶ ರಾಠೋಡ ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ ಇದ್ದರು.

# ಬೇಂದ್ರೆಯವರದು ಸರಳ ಶೈಲಿಯ ಸಾಹಿತ್ಯ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ದ.ರಾ.ಬೇಂದ್ರೆ ಅವರ ಸರಳ ಜೀವನ ನಮಗೆಲ್ಲರಿಗೂ ಮಾರ್ಗದರ್ಶನವಾಗಿದೆ ಎಂದು ಸಾಹಿತಿ ಎಸ್.ವಿ. ತಮ್ಮನಗೌಡ್ರ ಹೇಳಿದರು.

ಅವರು ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಮುಳಗುಂದ ಕನ್ನಡ ಸಾಹಿತ್ಯ ಪರಿಷತ್ ಘಟಕದಿಂದ ದ.ರಾ. ಬೇಂದ್ರೆ ಅವರ ಜನ್ಮದಿನಾಚ 'ರಣೆಯಲ್ಲಿ ಪಾಲ್ಗೊಂಡು ಮಾತನಾಡಿ,



ಬೇಂದ್ರೆ ಅವರ ಸಾಹಿತ್ಯ ಸರಿಯಾದ ಮಾರ್ಗವನ್ನು ತೋರಿಸು ವಂಥದ್ದಾಗಿದ್ದು, ಉತ್ತರ ಕರ್ನಾಟಕ ಭಾಷೆಯ ಸಾಹಿತ್ಯವನ್ನು ದೇಶದ ಮೂಲೆ ಮೂಲೆಗಳಿಗೆ ಪಸರಿಸಿದರು. ಸರಳ ಭಾಷೆಯ ಮೂಲಕ ಎಲ್ಲರಿಗೂ ಅರ್ಥವಾಗುವ ಶೈಲಿಯ ಅವರ ಸಾಹಿತ್ಯವನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕಿದೆ ಎಂದರು.

ಡಾ. ಎಸ್.ಸಿ. ಚವಡಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಎಂ.ಡಿ. ಬಟ್ಟೂರ, ಪಿ.ಎಸ್. ಮರಿದೇವರಮಠ, ರಾಜೇಶ್ವರಿ ಬಡ್ನಿ, ಶೋಭಾ ಪಾಟೀಲ, ಸುಮನ್ ಚವಡಿ, ಕೆ.ಎಂ. ಹೆರಕಲ್ಲ, ಮಂಜುನಾಥ ಮಟ್ಟಿ, ಶಿವಾನಂದ ಅಪ್ಪಗಿರಿ ಇದ್ದರು.

# ಫೆ. 4ರಂದು ತರಬೇತಿ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ಶಿಕ್ಷಣ ಅಧಿಕಾರಿಗಳಿಗೆ ಶಾಲೆಯಲ್ಲಿದೆ ಶಿಕ್ಷಣದ ಜೊತೆ ರಕ್ಷಣೆ ಎಂಬ ಶೀರ್ಷಿಕೆಯಡಿ ಆರ್.ಟಿ.ಇ ಕಾಯ್ದೆ , ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಕುರಿತು ತರಬೇತಿ ಕಾರ್ಯಕ್ರಮವನ್ನು ಫೆಬ್ರವರಿ 4 ರಂದು ಬೆ 10 ಗಂಟೆಗೆ ಜಿಲ್ಲಾಡಳಿತ ಭವನದ ರೂ. ನಂ. 122 ರಲ್ಲಿ ಹಮ್ಮಿಕೊಳ್ಳಲಾಗಿದೆ.

ತರಬೇತಿ ಕಾರ್ಯಕ್ರಮವನ್ನು ಕೆ.ಎಸ್.ಸಿ.ಪಿ.ಸಿ.ಆರ್ ದ ಸದಸ್ಯರಾದ ಶೇಖರಗೌಡ ರಾಮತ್ನಾಳ ಉದ್ಘಾಟಿಸುವರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಶ್ರೀಮತಿ ಜಯಶ್ರೀ ಕವಲೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರುಡಿ ಆಗಮಿಸುವರು. ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಬಿ.ಎನ್.ಸಂಶಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸುವರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ಸ್ವಾಗತ ಕೋರಿದ್ದಾರೆ.

### ಘನ ತ್ಯಾಜ್ಯ ವಿಲೇವಾರಿ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ನಿವೃತ್ತ ನ್ಯಾ. ಸುಭಾಷ್ ಆಡಿ

# ಕಾನೂನು ಬಾಹಿರ ಜಾಹೀರಾತುಗಳನ್ನು ತೆರವುಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮಾಡಿಕೊಂಡಿರುವುದು ಗಮನಕ್ಕೆ ಬಂದಿದೆ. ಜಾಹೀರಾತು ಫಲಕಗಳಲ್ಲಿ ಮಾತ್ರ ಜಾಹೀರಾತುಗಳನ್ನು ಅಳವಡಿಸದೇ ಗೋಡೆ, ಮರದ ಕೊಂಬೆಗಳಲ್ಲಿ ಜಾಹೀರಾತುಗಳನ್ನು ಅಂಟಿಸಲಾಗಿದೆ. ಪಾದಚಾರಿ ಮಾರ್ಗ ಅತಿಕ್ರಮಣ ಮತ್ತು ಕಾನೂನು ಬಾಹಿರ ಜಾಹೀರಾತುಗಳನ್ನು ತೆರವುಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ರಾಷ್ಟ್ರೀಯ ಹಸಿರು ನ್ಯಾಯಾಧಿಕರಣದ ರಾಜ್ಯ ಮಟ್ಟದ ಸಮಿತಿಯ ಅಧ್ಯಕ್ಷ, ನಿವೃತ್ತ ನ್ಯಾಯಾಧೀಶ ಸುಭಾಷ್ ಆಡಿ ಹೇಳಿದರು.

ಸೋಮವಾರ ಸರ್ಕ್ಯೂಟ್ ಹೌಸ್‌ನಲ್ಲಿ ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಧಾರವಾಡ ವಿಭಾಗ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಘನ ತ್ಯಾಜ್ಯ ನಿರ್ವಹಣೆ ಮತ್ತು ವಿಲೇವಾರಿ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಫುಟ್‌ಪಾತ್ ಮೇಲೆ ಬೈಕ್ ಮತ್ತು ಕಾರುಗಳನ್ನು ನಿಲ್ಲಿಸಿರುವುದು ಗಮನಕ್ಕೆ ಬಂದಿದೆ. ಪಾದಚಾರಿ ಮಾರ್ಗದಲ್ಲಿ ಯಾವುದೇ ವಾಹನ ನಿಲ್ಲಿಸದಂತೆ ಕ್ರಮ ಕೈಗೊಳ್ಳಬೇಕು. ವಾಹನ ಸವಾರರು ಪುಟಪಾತ್ ಮೇಲೆ ವಾಹನ ನಿಲ್ಲಿಸಿದರೆ ದಂಡವನ್ನು ವಿಧಿಸಬೇಕು. ಡಿಜಿಟಲ್



ಜಾಹೀರಾತು ಫಲಕಗಳಿಗೆ ಹೆಚ್ಚಿನ ಆದ್ಯತೆಯನ್ನು ನೀಡಬೇಕು. ಅನಧಿಕೃತವಾಗಿ ಜಾಹೀರಾತುಗಳನ್ನು ಬಿತ್ತರಿಸುವವರ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹುಬ್ಬಳ್ಳಿ-ಧಾರವಾಡ ನಗರಗಳಲ್ಲಿ ಒಳಂಚರಂಡಿಯ ಒಟ್ಟಾರೆ ಉದ್ದ, ಪೂರ್ಣಗೊಂಡ ಒಳಚರಂಡಿ ಕಾಮಗಾರಿಗಳು ಮತ್ತು ಉಳಿದ ಕಾಮಗಾರಿಯ ಮಾಹಿತಿ, ತಪ್ಪಿ ಹೋಗಿರುವ ಒಳಚರಂಡಿ ಸಂಪರ್ಕಗಳು, ಮನೆ ಮನೆಯಿಂದ ಸಂಗ್ರಹವಾಗುವ ತ್ಯಾಜ್ಯಗಳು ಸೇರಿದಂತೆ ಇತರ ಮಾಹಿತಿಗಳನ್ನು ಅಧಿಕಾರಿಗಳು ಸಂಗ್ರಹಿಸಬೇಕು. ಆ ಮೂಲಕ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನವಾಗಲಿವೆ ಎಂದರು.

ಮೂಲದಲ್ಲಿಯೇ ತ್ಯಾಜ್ಯ ವಸ್ತುಗಳನ್ನು ಹಸಿ ಕಸ, ಒಣ ಕಸ ಮತ್ತು ಗೃಹ ಬಳಕೆಯ ಹಾನಿಕಾರಕ ತ್ಯಾಜ್ಯ ಎಂದು ವಿಂಗಡಿಸಿ ವಿಲೇವಾರಿ ಮಾಡಲು ಕ್ರಮ ವಹಿಸಬೇಕು. ಪಾರಂಪರಿಕ ಮತ್ತು ಕಟ್ಟಡ ತ್ಯಾಜ್ಯಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು. ಈ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ನಗರಗಳಲ್ಲಿರುವ ಕಸಾಯಿಖಾನೆಗಳಲ್ಲಿ ಸಹ ಹೆಚ್ಚಾಗಿ ತ್ಯಾಜ್ಯ ಸಂಗ್ರಹವಾಗುತ್ತದೆ. ಕಸಾಯಿ ಖಾನೆಗಳಲ್ಲಿನ ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡುವಂತೆ ಕಸಾಯಿ ಖಾನೆ ಮಾಲೀಕರಿಗೆ ಅಧಿಕಾರಿಗಳು ತಿಳಿಸಬೇಕು ಎಂದು ತಿಳಿಸಿದರು.

ಏಷ್ಯಾದ ಎರಡನೇ ದೊಡ್ಡ ಎಪಿಎಂಸಿ ಮಾರುಕಟ್ಟೆಯಲ್ಲಿ ಅಪಾರ ಪ್ರಮಾಣದಲ್ಲಿ ತ್ಯಾಜ್ಯ ಸಂಗ್ರಹವಾಗುವುದು. ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು. ಜಲ ಹಾಗೂ ವಾಯು ಮಾಲಿನ್ಯವಾಗದಂತೆ ಕ್ರಮ ವಹಿಸಬೇಕಾಗುತ್ತದೆ ಎಂದು ತಿಳಿಸಿದರು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತರಾದ ರುದ್ರೇಶ ಘಾಳಿ ಮಾತನಾಡಿ, ಒಳ ಚರಂಡಿ ವ್ಯವಸ್ಥೆ ಬಗ್ಗೆ ಸಮಗ್ರ ಮಾಹಿತಿ ಸಿದ್ಧಪಡಿಸಲಾಗುವುದು. ತ್ಯಾಜ್ಯ ನಿರ್ವಹಣೆಗೆ ಹೆಚ್ಚಿನ ಒತ್ತು ನೀಡಲಾಗುವುದು. ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಮುಂದಿನ ಒಂದು ತಿಂಗಳಲ್ಲಿ ಏಕ ಬಳಕೆಯ ಪ್ಲಾಸ್ಟಿಕ್‌ನ್ನು ನಿಯಂತ್ರಣಕ್ಕೆ ತರಲಾಗುತ್ತದೆ ಎಂದರು.

ಸಭೆಯಲ್ಲಿ ಪರಿಸರ ಅಧಿಕಾರಿ ಜಗದೀಶ್, ಪಾಲಿಕೆಯ ವಲಯ ಆಯುಕ್ತರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ನಿಯಮಗಳು-2016ರಂತೆ ಏಕ ಬಳಕೆಯ ಪ್ಲಾಸ್ಟಿಕ್‌ನ್ನು ನಿಷೇಧಿಸಲಾಗಿದೆ. ಏಕ ಬಳಕೆಯ ಪ್ಲಾಸ್ಟಿಕ್ ಉಪಯೋಗಿಸುವವರ ವಿರುದ್ಧ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಅಲ್ಲದೇ ದಂಡವನ್ನು ವಿಧಿಸಿ, ಅವರ ವ್ಯಾಪಾರ ಪರವಾನಗಿಯನ್ನು ರದ್ದುಪಡಿಸಬೇಕು. ಪ್ಲಾಸ್ಟಿಕ್ ಬಳಕೆಯನ್ನು ನಿಯಂತ್ರಣ ಮಾಡಿ. ಪಾಲಿಕೆ ಅಧಿಕಾರಿಗಳು, ಪೊಲೀಸ್ ಇಲಾಖೆ ಹಾಗೂ ಪರಿಸರ ಇಲಾಖೆ ಅಧಿಕಾರಿಗಳು ಪ್ಲಾಸ್ಟಿಕ್ ತಯಾರಿಸುವ ಕಾರ್ಖಾನೆಗಳ ಮೇಲೆ ದಾಳಿ ನಡೆಸಿ, ಸೂಕ್ತ ಕ್ರಮ ವಹಿಸಬೇಕು ಎಂದು ಸುಭಾಷ್ ಆಡಿ ಸೂಚಿಸಿದರು.

# ಬಜೆಟ್‌ನಲ್ಲಿ ಅಭಿವೃದ್ಧಿ ಮರೀಚಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಶನಿವಾರ ಮಂಡಿಸಿರುವ 2025–26ನೇ ಸಾಲಿನ ಮುಂಗಡಪತ್ರದಲ್ಲಿ ಅಭಿವೃದ್ಧಿ ವಿಚಾರಗಳು ಮರಿಚೀಕೆಯಾಗಿವೆ. ಇದೊಂದು ಅಭಿವೃದ್ಧಿ ಯೋಜನೆಗಳಿಂದ ಅಂತರವನ್ನು ಕಾಯ್ದುಕೊಂಡಿರುವ ಮುಂಗಡಪತ್ರವಾಗಿದೆ ಎಂದು ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಪೀರಸಾಬ ಕೌತಾಳ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಅನುದಾನ ಹಂಚಿಕೆಯಲ್ಲಿ ತಾರತಮ್ಯವಾಗಿದೆ. ಶಿಕ್ಷಣ, ಆರೋಗ್ಯ, ನಗರ ಅಭಿವೃದ್ಧಿ, ಇಂಧನ, ರಕ್ಷಣಾ ವಲಯ, ವೈಜ್ಞಾನಿಕ, ಸಮಾಜ ಕಲ್ಯಾಣ ಕ್ಷೇತ್ರಗಳಿಗೆ ಇನ್ನೂ ಹೆಚ್ಚಿನ ಅನುದಾನ ಕೊಡಬಹುದಿತ್ತು. ಆದರೆ, ಪ್ರಗತಿ ಮತ್ತು ಅಭಿವೃದ್ಧಿ ಚಿಂತನೆಗಳನ್ನು ದೂರ ಇಟ್ಟಿರುವ ಮುಂಗಡಪತ್ರ ಇದಾಗಿದೆ ಎಂದು ಅವರು ಟೀಕಿಸಿದ್ದಾರೆ.

# ಬಜೆಟ್: ಭವ್ಯ ಭಾರತ ನಿರ್ಮಾಣಕ್ಕೆ ನೀಲನಕ್ಷೆ




■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ಮೋದಿಯವರ ನೇತೃತ್ವದಲ್ಲಿ ಭಾರತ ವಿಶ್ವ ಗುರುವಾಗುತ್ತಿದ್ದು, ಇದಕ್ಕೆ ಪೂರಕವಾಗುವ ನಿಟ್ಟಿನಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಬಜೆಟ್ ಭವ್ಯ ಭಾರತ ನಿರ್ಮಾಣಕ್ಕೆ ನೀಲನಕ್ಷೆ ಹಾಕಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಆದಾಯ ತೆರಿಗೆ ವಿನಾಯಿತಿಯನ್ನು 12 ಲಕ್ಷಕ್ಕೆ ಏರಿಸುವ ಮೂಲಕ ಭಾರತದ ಬಡ ಹಾಗೂ ಮಧ್ಯಮ ವರ್ಗದ ಹಿತವನ್ನು ಕೇಂದ್ರ ಸರ್ಕಾರ ಕಾಪಾಡಿದೆ. ಪ್ರಧಾನಿ ಮೋದಿ ಸರ್ಕಾರ ಕೇವಲ ಶ್ರೀಮಂತರ ಸರ್ಕಾರ ಎನ್ನುವ ಕಾಂಗ್ರೆಸ್‌ನ ವಾದವು ಸುಳ್ಳೆಂದು ಸಾಬೀತಾಗಿದೆ. ಕೃಷಿ, ಸಾರಿಗೆ, ಕೈಗಾರಿಕೆ, ಉದ್ಯೋಗ, ಪ್ರವಾಸೋದ್ಯಮ, ವೈದ್ಯಕೀಯ, ಶಿಕ್ಷಣ ಸೇರಿದಂತೆ ಸರ್ವ ಕ್ಷೇತ್ರಗಳಿಗೆ ಆದ್ಯತೆ ನೀಡಲಾಗಿದ್ದು, ವಿಶೇಷವಾಗಿ ಕಿಸಾನ್ ಕ್ರೆಡಿಟ್ ಕಾರ್ಡಿನ ಮಿತಿಯನ್ನು 5 ಲಕ್ಷಕ್ಕೆ ಹೆಚ್ಚಿಸುವ ಮೂಲಕ ರೈತರ ಸಬಲೀಕರಣಕ್ಕೆ ಮೋದಿ ಸರ್ಕಾರ ಮಹತ್ವದ ಕ್ರಮ ಕೈಕೊಂಡಿದೆ.

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಬೊಕ್ಕಸ ಖಾಲಿ ಮಾಡಿಕೊಂಡು ದಿನಕ್ಕೊಂದು ಬೆಲೆಯೇರಿಕೆ ಮಾಡಿ ಕೆಟ್ಟ ಆಡಳಿತ ನೀಡುತ್ತಿದ್ದರೆ, ಕೇಂದ್ರ ಸರ್ಕಾರ ತೆರಿಗೆ ವಿನಾಯಿತಿ ಮೂಲಕ ಜನರ ಆರ್ಥಿಕ ಹೊರೆ ನೀಗಿಸಿದೆ ಎಂದು ತಿಳಿಸಿದ್ದಾರೆ.

# ವಿಸಿ ನಾಲೆಯಲ್ಲಿ ಮತ್ತೊಂದು ದುರಂತ: ಕಾರು ಉರುಳಿಬಿದ್ದು ಮೂವರು ಸಾವು.!



■ವಿಜಯಸಾಕ್ಷಿ ಸುದ್ದಿ, ಮಂಡ್ಯ

ಸಕ್ಕರೆನಾಡಲ್ಲಿ ಮತ್ತೊಂದು ನಾಲೆ ದುರಂತ ಸಂಭವಿಸಿದೆ. ವಿ.ಸಿ ನಾಲೆಗೆ ನಾಲ್ವರು ಪ್ರಯಾಣಿಕರಿದ್ದ ಕಾರೊಂದು ಉರುಳಿ ಬಿದ್ದು ಮೂವರು ಸ್ಥಳದಲ್ಲೆ ಸಾವನ್ನಪ್ಪಿರುವ ಘಟನೆ ಮಂಡ್ಯ ತಾಲೂಕಿನ ಮಾಚಹಳ್ಳಿ ಬಳಿ ನಡೆದಿದೆ. ಮಂಡ್ಯ ನಗರದ ಹಾಲಹಳ್ಳಿ ಫಯಾಜ್ ಅಲಿಯಾಸ್ ಬ್ಯಾಟರಿ, ಆಯಾಜ್, ಖಾಜು ಮೃತರು.

ಕಾರಿನಲ್ಲಿದ್ದ ಇನ್ನೊಬ್ಬ ವ್ಯಕ್ತಿ ನಯಾಜ್ ನಾಲೆ ನೀರಿನಲ್ಲಿ ಈಜಿಕೊಂಡು ಪಾರಾಗಿದ್ದಾನೆ. ಓರ್ವನ ಮೃತ ದೇಹ ಪತ್ತೆಯಾಗಿದ್ದು, ನಾಪತ್ತೆಯಾದ ಇಬ್ಬರಿಗಾಗಿ ರಕ್ಷಣಾ ಕಾರ್ಯಾಚರಣೆ ನಡೆಸಲಾಗುತ್ತಿದೆ. ಚಾಲಕನ ನಿಯಂತ್ರಣ ತಪ್ಪಿದ ಹಿನ್ನೆಲೆಯಲ್ಲಿ ಈ ದುರ್ಘಟನೆ ನಡೆದಿದೆ. ಇನ್ನು ಸ್ಥಳಕ್ಕೆ ಬಂದ ಅಗ್ನಿಶಾಮಕ ದಳ ಸಿಬ್ಬಂದಿ ಅಪಾರ ಪ್ರಮಾಣದಲ್ಲಿ ಹರಿಯುತ್ತಿರುವ ನೀರಿನಲ್ಲಿ ಕಾರ್ಯಾಚರಣೆ ಮುಂದುವರೆಸಿದ್ದಾರೆ.

# ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ ಯತ್ನಾಳ್ ಕಿಡಿ



■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಬಿಜೆಪಿ ಮನೆಯಲ್ಲಿನ ಬಣ ಬಡಿದಾಟ ಕ್ಷಣಕ್ಷಣ–ಕ್ಕೂ ರೋಚಕ ತಿರುವು ಪಡೆಯುತ್ತಲೇ ಇದೆ. ಪ್ರಾರಂಭದಲ್ಲಿ ಏಕಾಂಗಿಯಾಗಿ ವಿಜಯೇಂದ್ರ ವಿರುದ್ಧ ಸಮರ ಸಾರಿದ್ದ ಯತ್ನಾಳ್ ಬಣದ ಶಕ್ತಿ ಮತ್ತಷ್ಟು ಹೆಚ್ಚಾಗುತ್ತಿದೆ. ಇದೀಗ ಯಡ್ಡಿಯೂರಪ್ಪ ಅವರ ಮಗನ ಕರ್ಮಕಾಂಡದ ಬಗ್ಗೆ ವಿವರಿಸಲು ಹೊರಟಿದ್ದೇವೆ ಎಂದು ವಿಜಯೇಂದ್ರ ವಿರುದ್ಧ ಯತ್ನಾಳ್ ಮತ್ತೊಮ್ಮೆ ಕಿಡಿಕಾರಿದ್ದಾರೆ.

ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇಷ್ಟು ದಿನ ತಟಸ್ಥರಿದ್ದವರು ಇದೀಗ ನಮ್ಮ ನಿಷ್ಠಾವಂತರ ಗುಂಪು ಸೇರಿದ್ದಾರೆ. ರಾಜ್ಯಾಧ್ಯಕ್ಷ ಸ್ಥಾನದ ಬಗ್ಗೆ ಹೈಕಮಾಂಡ್ ಗಮನಕ್ಕೆ ತರಲು ಹೊರಟಿದ್ದೇವೆ. ವಂಶಪಾರಂಪರಿಕ, ಕುಟುಂಬಶಾಹಿ ವಿರುದ್ಧ ನಮ್ಮ ಹೋರಾಟ ಇದೆ. ಯಡಿಯೂರಪ್ಪ ಅವರ ಮಗನ ಕರ್ಮಕಾಂಡದ ಬಗ್ಗೆ ವಿವರಿಸಲು ಹೊರಟಿದ್ದೇವೆ ಎಂದು ಕಿಡಿಕಾರಿದ್ದಾರೆ..

## ನಿಧನ

### ಭರಮಪ್ಪ ಬಸಪ್ಪ ಕುರಿ



ನರೇಗಲ್ಲ: ಸಮೀಪದ ಜಕ್ಕಲಿ ಗ್ರಾಮದ ನಿವಾಸಿ ಭರಮಪ್ಪ ಬಸಪ್ಪ ಕುರಿ (82) ರವಿವಾರ ನಿಧನರಾದರು. ಮೃತರು ಕವಿ, ಶಿಕ್ಷಕ ಈಶ್ವರ ಕುರಿಯವರ ತಂದೆಯವರಾಗಿದ್ದು, ಮೃತರಿಗೆ ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ–ಬಂಧು ಬಳಗದವರು ಇದ್ದಾರೆ.

**ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು**

# ಶಿರಸಂಗಿ ಲಿಂಗರಾಜರ ಬದುಕು ಅನುಕರಣೀಯ

■ವಿಜಯಸಾಕ್ಷಿ ಸುದ್ದಿ, ಗದಗ

ಲಿಂಗಾಯತ ಧರ್ಮ ಮತ್ತು ಸಂಸ್ಕೃತಿಯನ್ನು ಉಳಿಸಿ–ಬೆಳೆಸುವಲ್ಲಿ ಶಿರಸಂಗಿ ಲಿಂಗರಾಜರ ಕೊಡುಗೆ ಅಗಾಧವಾದುದು. ಲಿಂಗಾಯತ ಮಕ್ಕಳ ವಿದ್ಯಾಭ್ಯಾಸಕ್ಕೆ ತಮ್ಮ ಸಂಪೂರ್ಣ ಆಸ್ತಿಯನ್ನೇ ಧಾರೆಯೆರೆದಿದ್ದಾರೆ. ಶಿರಸಂಗಿ ಲಿಂಗರಾಜರ ತ್ಯಾಗಗುಣ, ಸಮಾಜಮುಖಿ ಬದುಕು, ನಡೆ–ನುಡಿ, ಆದರ್ಶಗಳು ಅನುಕರಣೀಯ ಎಂದು ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2730ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಶಿರಸಂಗಿ ಲಿಗರಾಜರು ಮಾಡಿದ ಲಿಂಗಾಯತ ಸಮ್ಮೇಳನದ ಅಂದಿನ ಭಾಷಣ ಮಹತ್ವಪೂರ್ಣವಾಗಿತ್ತು. ಮೀಸಲಾತಿ ಹಾವಳಿ ಅಂದು ಇರಲಿಲ್ಲ. ಲಿಂಗಾಯತ ಧರ್ಮದ ಎಲ್ಲಾ ಒಳಪಂಗಡಗಳು ಒಂದಾಗಿದ್ದವು. ಲಿಂಗಾಯತ ಸಮಾಜದ ಹಿರಿಯರಾದ ಫ.ಗು ಹಳಕಟ್ಟಿಯವರು, ಅರಟಾಳ ರುದ್ರಗೌಡರು, ಡೆಪ್ಯುಟಿ ಚನ್ನಬಸಪ್ಪನವರು ಮುಂತಾದ ಹಿರಿಯರ ಕೊಡುಗೆ ಅಪಾರ. ಲಿಂಗರಾಜರ ತ್ಯಾಗವನ್ನು ಜನ ತಿಳಿಯಬೇಕು. ನಿರಂತರ ನೆನೆಯಬೇಕು. ಅವರ ಬದುಕು, ಸಾಧನೆ, ನಡೆ–ನುಡಿಗಳು ತುಂಬಾ ವೈಶಿಷ್ಟ್ಯವಾಗಿದೆ. ಲಿಂಗರಾಜರು ಕಷ್ಟಗಳನ್ನು ಸಹಿಸಿಕೊಂಡು ಕಲ್ಲಾಗು, ಕಷ್ಟಗಳು ಮಳೆ ಸುರಿಯೆ ಎಂಬಂತೆ ಗಟ್ಟಿಯಾಗಿ ವೀರರಾಗಿ,



ಧೀರಗಾಗಿ, ಬದುಕಿದವರು ಎಂದರು.

ಬಸವಾನಂದ ಸ್ವಾಮಿಗಳು ಬರೆದ 'ವಚನ ಹೃದಯ' ಪುಸ್ತಕ ತುಂಬಾ ಅರ್ಥಪೂರ್ಣವಾಗಿ ಮೂಡಿಬಂದಿದೆ. ಲಿಂಗಾಯತ ಧರ್ಮಕ್ಕಾಗಿ ದುಡಿದ, ಲಿಂಗರಾಜ ಜಯಂತಿಯ ಆಚರಣೆ ಸಂದರ್ಭದಲ್ಲಿ ವಚನ ಹೃದಯ ಪುಸ್ತಕ ಲೋಕಾರ್ಪಣೆಗೊಂಡಿದ್ದು ವಿಶೇಷ ಎಂದರು.

' ವಚನ ಹ್ಲದಯ' ಪುಸ್ತಕ ಪರಿಚಯ ಮಾಡಿದ ಗುರುಬಸವ ಮಹಾಮನೆ ಚೆನ್ನಯ್ಯನಗಿರಿ ಮನಗುಂಡಿಯ ಪೂಜ್ಯ ಬಸವಾನಂದ ಸ್ವಾಮಿಗಳು, ವಚನ ಹೃದಯದಲ್ಲಿ 30 ಅಧ್ಯಾಯಗಳಿವೆ. ಮೊದಲ ಭಾಗದಲ್ಲಿ ಸುಮಾರು 35ಕ್ಕೂ ಹೆಚ್ಚು ಶರಣರ ವಚನಗಳ ಅಂತರಂಗದ ಬಾಗಿಲು ತೆರೆದು ತೋರಿಸಿದೆ. ಎರಡನೇ ಭಾಗ ಶರಣರ ವಚನಾಂಕಿತಗಳಿಗೆ ಸಂಬಂಧಿಸಿದೆ ಎಂದು ಹೇಳಿದರು.

ಅತಿಥಿಗಳಾಗಿ ಶಿದ್ರಾಮಪ್ಪ ಗೊಜನೂರ, ಈಶಣ್ಣ ಮುನವಳ್ಳಿ, ಅನಿಲ ಪಾಟೀಲ, ಬಸವರಾಜ ಬಿಂಗಿ, ಮಹೇಶ್‌ಗೌಡ ಪಾಟೀಲ್ ಹಾಗೂ ಡಾ. ಹನುಮಾಕ್ಷಿ ಗೋಗಿ ಉಪಸ್ಥಿತರಿದ್ದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನ ಸಂಗೀತ ನೇರವೇರಿಸಿದರು. ಧರ್ಮಗ್ರಂಥ ಪಠಣವನ್ನು ಶ್ರೇಯಾ ಜಾಲಿಹಾಳ, ವಚನಚಿಂತನವನ್ನು ರಕ್ಷಿತಾ ಬಳಿಗೇರ ನಡೆಸಿದರು. ದಾಸೋಹ ಸೇವೆಯನ್ನು ಶಿವಯೋಗಿ ಹುಬ್ಬಳ್ಳಿ ಸಹೋದರರು ಹಾಗೂ ಅಖಿಲ ಕರ್ನಾಟಕ ಲಿಂಗಾಯತ ಕುಡು ಒಕ್ಕಲಿಗರ ಸಮಾಜದ ರಾಜ್ಯಾಧ್ಯಕ್ಷ ಶಿವಕುಮಾರಗೌಡ ಪಾಟೀಲ ವಹಿಸಿಕೊಂಡಿದ್ದರು.

> ಉಪನ್ಯಾಸಕರಾಗಿ ಆಗಮಿಸಿದ ಮುಂಡರಗಿಯ ಕೆ.ಆರ್. ಬೆಲ್ಲದ ಕಾಲೇಜು ಪ್ರಾಧ್ಯಾಪಕ ಎಂ.ಜಿ. ಗಚ್ಚಣ್ಣವರ ಮಾತನಾಡಿ, ಲಿಂಗರಾಜರ ನವಲಗುಂದ ವಾಡೆಯ ಅಭಿವೃದ್ಧಿ ಆಗಬೇಕಿದೆ. ಭಾರತದ ಹಲವಾರು ಸಂಸ್ಥಾನಗಳಲ್ಲಿ ಲಿಂಗರಾಜ ದೇಸಾಯಿ ಅವರ ಸಂಸ್ಥಾನ ಗಟ್ಟಿಯಾಗಿ ನಿಂತು ಲಿಂಗಾಯತ ಸಮಾಜದ ಮಕ್ಕಳ ಶಿಕ್ಷಣಕ್ಕೆ ಅವಿರತವಾಗಿ ಪರಿಶ್ರಮಿಸುತ್ತ ಬಂದಿದೆ. ಸಮಾಜ ಸಂಘಟನೆಗಳಿಗೆ ಹಲವು ದತ್ತಿ ದಾನಗಳನ್ನು ಮಾಡಿದ್ದಲ್ಲದೆ ಇಡೀ ಸರ್ವಸ್ವವನ್ನು ಸಮಾಜಕ್ಕಾಗಿ ಧಾರೆಯೆರೆದ ಧೀರೋದಾತ್ತರು ಎಂದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ಸಹ ಚೇರಮನ್ ಶಿವಾನಂದ ಹೊಂಬಳ ಪರಿಚಯಿಸಿದರು. ಉಪಾಧ್ಯಕ್ಷರಾದ ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

**ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಡಾ. ಗುರುಪ್ರಸಾದ**

# ಕಣ್ಣುಗಳ ಸಂರಕ್ಷಣೆ ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಕಣ್ಣುಗಳನ್ನು ಸಂರಕ್ಷಣೆ ಮಾಡಿಕೊಳ್ಳುವದು ಅವಶ್ಯ ಹಾಗೂ ಅನಿವಾರ್ಯವಾಗಿದೆ ಎಂದು ಹುಬ್ಬಳ್ಳಿಯ ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆಯ ಹಿರಿಯ ತಜ್ಞ ವೈದ್ಯರಾದ ಡಾ. ಎ.ಎಸ್. ಗುರುಪ್ರಸಾದ ಹೇಳಿದರು.

ಅವರು ಬೆಟಗೇರಿಯ ಗಾಂಧಿ ನಗರದ ಸರ್ಕಾರಿ ಶಾಲೆ ನಂ. 5ರಲ್ಲಿ ಗದಗ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ, ಹುಬ್ಬಳ್ಳಿಯ ಎಸ್.ಜಿ.ಎಂ. ನೇತ್ರ ಭಂಡಾರ ಹಾಗೂ ಸಂಶೋಧನಾ ಪ್ರತಿಷ್ಠಾನ, ಗೋಧೋಳಿ ಸಂಸ್ಥೆ, ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಉಚಿತ ಕಣ್ಣಿನ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

> ಉಚಿತ ಕಣ್ಣಿನ ತಪಾಸಣೆ ಮತ್ತು ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಒಟ್ಟು 220 ಜನರಿಗೆ ಕಣ್ಣಿನ ತಪಾಸಣೆ ಮಾಡಲಾಯಿತು. ಇವರಲ್ಲಿ 47 ಜನರನ್ನು ಕಣ್ಣಿನ ಪೊರೆಯ ಉಚಿತ ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಯಿತು ಎಂದು ಸಂಘಟಕರು ತಿಳಿಸಿದ್ದಾರೆ.

ಕಣ್ಣಿಗೆ ಅಪಾಯವನ್ನುಂಟುಮಾಡುವ ಸನ್ನಿವೇಶಗಳಿಂದ ಸಂರಕ್ಷಿಸಿಕೊಳ್ಳಬೇಕು. ದಾನಗಳಲ್ಲಿ ನೇತ್ರದಾನ ಶ್ರೇಷ್ಠವಾಗಿದೆ. ವ್ಯಕ್ತಿ ಬದುಕಿದ್ದಾಗಲೇ ನೇತ್ರದಾನಕ್ಕೆ ಒಪ್ಪಿಗೆ ಸೂಚಿಸಿರಬೇಕು ಇಲ್ಲವೆ ಮೃತನ ಕುಟುಂಬದವರ ಒಪ್ಪಿಗೆಯಿಂದ ಕಣ್ಣು ದಾನ ಮಾಡಬಹುದಾಗಿದೆ. ವ್ಯಕ್ತಿಯ ಸಾವಿನ ಬಳಿಕ ಕಣ್ಣುಗಳು ಮಣ್ಣಿನಲ್ಲಿ ಮಣ್ಣು ಆಗದೇ ಅಥವಾ ಅಗ್ನಿಗೆ ಆಹುತಿಯಾಗದೆ ಕಣ್ಣು ದಾನ ಮಾಡಿದರೆ ಆ ಕಣ್ಣಿನಿಂದ ಕಣ್ಣಿಲ್ಲದ ವ್ಯಕ್ತಿ ಜಗತ್ತನ್ನು ನೋಡಬಹುದಾಗಿದೆ ಎಂದರು.

ಸಮಾರಂಭದಲ್ಲಿ ಡಾ. ರಾಜೇಂದ್ರ, ಗೋಧೋಳಿ ಸಂಸ್ಥೆಯ ಅನನ್ಯ ಆಯಾಚಿತ, ಶಾಲಾ ಮುಖ್ಯೋಪಾಧ್ಯಾಯ ಅಶೋಕ ಪತ್ತಾರ, ಗದಗ–ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ನಿತೀಶ್ ಸಾಲಿ, ದತ್ತು ಬೇವಿನಕಟ್ಟಿ, ರಮೇಶ ಶಿಗ್ಲಿ, ಮೋಹನ ಕಟ್ಟಿಮನಿ, ಕೃಷ್ಣಪ್ಪ ಬಾಗಲಕೋಟಿ, ವೈ.ಜಿ. ಗಡಾದ, ಇಮಾಮಸಾಬ ಹುಲ್ಲೂರ, ಬಸೀರ್, ಬಿ.ಬಾಬು, ಹನಮಂತಪ್ಪ ವೀರಾಪೂರ, ರಾಜು ಚವ್ಹಾಣ, ರಮೇಶ ಗಡಾದ, ಮಂಜುನಾಥ ಬಗಾಡೆ, ಬಾಬು ಕಾಳೆ ಮುಂತಾದವರಿದ್ದರು.



**ಬೊಮ್ಮಸಾಗರ ದುರ್ಗಾದೇವಿ ಜಾತ್ರೆಯ ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ ಸೂಚನೆ**

# ಭಕ್ತರಿಗೆ ತೊಂದರೆಯಾಗದಂತೆ ವ್ಯವಸ್ಥೆ ಕೈಗೊಳ್ಳಿ



■ವಿಜಯಸಾಕ್ಷಿ ಸುದ್ದಿ, ರೋಣ

ಬೊಮ್ಮಸಾಗರ ದುರ್ಗಾದೇವಿ ಜಾತ್ರೆಗೆ ಆಗಮಿಸುವ ಭಕ್ತರಿಗೆ ಯಾವುದೇ ರಿತಿಯ ತೊಂದರೆ–ಯಾಗದಂತೆ ನಿಗಾ ವಹಿಸಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಅವರು ಸೋಮವಾರ ಸಂಜೆ ಬೊಮ್ಮಸಾಗರ ದುರ್ಗಾದೇವಿ ಸಭಾಂಗಣದಲ್ಲಿ ಜರುಗಿದ ಜಾತ್ರಾ ಮಹೋತ್ಸವದ ನಿಮಿತ್ತ ಕರೆದಿದ್ದ ತಾಲೂಕು ಮಟ್ಟದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಫೆ.11ರಂದು ದೇವಿ ಹೇಳಿಕೆ, ಫೆ.12ರಂದು ಉಡಿ ತುಂಬುವುದು, ಫೆ.13ರಂದು ದೇವಿಯ ರಥೋತ್ಸವ ಜರುಗಲಿದೆ. ದೇವಿಯ ಸಾನ್ನಿಧ್ಯಕ್ಕೆ ಪ್ರತಿ ವರ್ಷದಂತೆ ಅಪಾರ ಸಂಖ್ಯೆಯ ಭಕ್ತರು ಆಗಮಿಸುತ್ತಾರೆ. ಎರಡೂ ತಾಲೂಕಿನ ತಾಲೂಕಾಡಳಿತ ಸ್ಥಳದಲ್ಲಿ ಬಿಡಾರ ಹೂಡಿ ಆಗಮಿಸುವ ಭಕ್ತರಿಗೆ ತೆ–ೂಂದರೆಯಾಗದಂತೆ ನಿಗಾ ವಹಿಸಬೇಕು ಎಂದರು.

ಗ್ರಾಮದ ಸ್ವಚ್ಛತೆಗೆ ಸಂಬಂಧಿಸಿ ಗ್ರಾ.ಪಂ ಹಾಗೂ ತಾ.ಪಂ ಆಡಳಿತ ಮಂಡಳಿ ನಿರ್ಲಕ್ಷ್ಯ ವಹಿಸಬಾರದು. ಮುಖ್ಯವಾಗಿ ಕುಡಿಯುವ ನೀರಿನ ತೆ–ೂಂದರೆಯಾಗದಂತೆ ಹಾಗೂ ವಿದ್ಯುತ್ ಕಡಿತವಾಗದಂತೆ ಎಚ್ಚರಿಕೆ ವಹಿಸಬೇಕು. ಬಂದ ಭಕ್ತರಿಗೆ ಸ್ಥಳದಲ್ಲಿ ವೈದ್ಯಕೀಯ ಸೇವೆ ಲಭಿಸಬೇಕು. ಅತಿ ದೊಡ್ಡ ಜಾತ್ರೆಯಿರುವುದರಿಂದ ಶಾಲಾ ಕಟ್ಟಡಗಳಲ್ಲಿ ಆರೋಗ್ಯ ಸೇವೆಯನ್ನು ನಿಡಿ ಎಂದು ತಿಳಿಸಿದರು.

ಸುಗಮ ಸಂಚಾರಕ್ಕೆ ಯಾವುದೇ ರಿತಿಯ ತೊಂದರೆಯಾಗದಂತೆ ನಿಗಾ ವಹಿಸಬೇಕು. ಪಶು ಆರೋಗ್ಯ ಕೇಂದ್ರವನ್ನು ಸಹ ಸ್ಥಾಪಿಸಬೇಕು ಎಂದರು ಪಿಎಸ್‌ಐ ಪ್ರಕಾಶ ಬಣಕಾರ ಮಾತನಾಡಿ, ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಅಗತ್ಯ ಕ್ರಮ ಕೈಗೊಂಡಿದ್ದು, ನಾಲ್ಕು ಕಡೆಗಳಲ್ಲಿ ಭಕ್ತರ ವಾಹನಗಳು ತಂಗಲು ವ್ಯವಸ್ಥೆ ಮಾಡಲಾಗಿದೆ ಎಂದು ಸಭೆಗೆ ವಿವರಿಸಿದರು.

ಜಿ.ಪಂ ಮಾಜಿ ಉಪಾಧ್ಯಕ್ಷೆ ಮಂಜುಳಾ ಹುಲ್ಲಣ್ಣವರ, ಶರಣಗೌಡ ಪಾಟೀಲ, ಮೋಹನ್ ಹುಲ್ಲಣ್ಣವರ, ಹನ್ಮಂತಪ್ಪ ಹಟ್ಟಿಮನಿ ಸೇರಿದಂತೆ ರೋಣ–ಗಜೇಂದ್ರಗಡ ತಾಲೂಕಿನ ತಹಸೀಲ್ದಾರರು, ತಾ.ಪಂ ಇಒ ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಡಂಬಳ ಗ್ರಾಮದಲ್ಲಿ ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ, ಸ್ನೇಹ ಸಮ್ಮಿಲನ**


# ಶಿಕ್ಷಕರಿಂದಲೇ ವಿದ್ಯಾರ್ಥಿಗಳ ಭವಿಷ್ಯ

■ವಿಜಯಸಾಕ್ಷಿ ಸುದ್ದಿ, ಡಂಬಳ

ದೇಶದ ಭವಿಷ್ಯ ಮತ್ತು ವಿದ್ಯಾರ್ಥಿಗಳ ಭವಿಷ್ಯ ಅಡಗಿರುವುದು ಶಿಕ್ಷಕರಿಂದ. ಹೀಗಾಗಿ, ಶಿಕ್ಷಕರು ಶುದ್ಧವಾದ ರೀತಿಯ ಬರವಣಿಗೆ, ಸ್ಪಷ್ಟವಾಗಿ ಓದುವಿಕೆ, ನಕ್ಷೆ, ವಿಜ್ಞಾನ, ಕಲೆ, ಸಾಂಸ್ಕೃತಿಕವಾಗಿ, ನಿತ್ಯ ಪುಸ್ತಕಗಳ ಓದುವಿಕೆಯ ಮೂಲಕ ಸರ್ವಜ್ಞನಾಗಿರಬೇಕು ಎಂದು ನಿವೃತ್ತ ಶಿಕ್ಷಕ ಬಿ.ಎಚ್. ಜಕ್ಕಲಿ ಹೇಳಿದರು.

ಡಂಬಳ ಗ್ರಾಮದ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ, ಶ್ರೀಮತಿ ಕಾಳಮ್ಮ ವೀರಪ್ಪ ಹುಲಬನ್ನಿ ಸರಕಾರಿ ಹೆಣ್ಣು ಮಕ್ಕಳ ಶಾಲೆ, ಜಗದ್ಗುರು ತೋಂಟದಾರ್ಯ ಪ್ರೌಢ ಮತ್ತು ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ 1989–90ನೇ ಸಾಲಿನ 7ನೇ ತರಗತಿ ಹಾಗೂ 1992–93ನೇ ಸಾಲಿನ 10ನೇ ತರಗತಿ ವಿದ್ಯಾರ್ಥಿಗಳ ಸ್ನೇಹ ಬಳಗ ಹಮ್ಮಿಕೊಂಡಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಡಯಟ್ ಉಪನ್ಯಾಸಕ ಯಲ್ಲಪ್ಪ ಹಂದ್ರಾಳ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಭವಿಷ್ಯದ ಅಕ್ಷರ ಬೀಜವನ್ನು ಬಿತ್ತುವ ಶಿಕ್ಷಕರು ತಮ್ಮ ಮಕ್ಕಳಿಗಿಂತ ಶಾಲಾ ಮಕ್ಕಳ ಭವಿಷ್ಯ ಕಟ್ಟಲು ಶ್ರಮಿಸಲು ಮುಂದಾಗುತ್ತಾರೆ. ಅವರು ಗುರುಗಳಾಗಿ ಹೊರಹೊಮ್ಮುವುದರ ಮೂಲಕ ವಿದ್ಯಾರ್ಥಿಗಳ ಸನ್ಮಾನಕ್ಕೆ ಭಾಜಿನರಾಗುತ್ತಾರೆ. ಆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಬಳಗ ಗುರುವೃಂದವನ್ನು ಸನ್ಮಾನಿಸುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.



ನಿವೃತ್ತ ಶಿಕ್ಷಕಿ ಬಿಬಿಜಾನ ಸುಂಕದ, ಬುಡ್ನೆಸಾಬ ಅತ್ತಾರ ಮಾತನಾಡಿದರು. ಡಂಬಳ ಗ್ರಾಮದ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಗೆ ಶಾಲಾ ಪರಿಕರ ನೀಡಿದರು. ಕಾರ್ಯಕ್ರಮದಲ್ಲಿ ಎಸ್‌ಡಿಎಮ್‌ಸಿ ಅಧ್ಯಕ್ಷೆ ಶ್ರೀದೇವಿ ಹಿರೇಮಠ, ಜಿ.ವಿ. ಹಿರೇಮಠ, ಶಿವು ವಿಭೂತಿ, ಡಾ. ಅಮೃತಾ ಬೆನ್ನಾಳ, ಮೃತ್ಯುಂಜಯ ಪೂಜಾರ, ವಿ.ಆರ್. ರಾಚಯ್ಯನವರ, ಆರ್.ಜಿ. ಕೊರ್ಲಹಳ್ಳಿ, ಮಂಜುನಾಥ ರನ್ನವರ, ಬುಡ್ನೆಸಾಬ ಅತ್ತಾರ, ಉಮೇಶ ಲಕ್ಕುಂಡಿ, ಬುಡ್ನೆಸಾಬ ಬೆನಕೊಪ್ಪ, ಬಾಬುಸಾಬ ಮೂಲಿಮನಿ, ಕುಬೇರಪ್ಪ ಕೊಳ್ಳಾರ, ಬಸುರಾಜ ತಳವಾರ, ವೆಂಕಟೇಶ ಕೌಜಗೇರಿ, ಫಕೀರಪ್ಪ ಆನಿ, ಚೆನ್ನಪ್ಪ ಮಲಕಶೆಟ್ಟಿ, ಶಾಮಣ್ಣ ಕಲಾಲ, ಮಾರುತಿ ದಾಸರ, ಶಿವರಡ್ಡಿ ಕುಸಗಲ್ಲ, ರಂಗಪ್ಪ ಜೋಂಡಿ, ತಿರಕಪ್ಪ ಕಟ್ಟಣ್ಣವರ, ಲಕ್ಷ್ಮಣ ಪಾರಪ್ಪನವರ, ಜಂದಿಸಾಬ ತಾಂಬೋಟಿ, ಮಂಜುನಾಥ ಹಡಪದ, ಹನಮಂತ ಕುಂಚಿಕೊರವರ, ಗುರುವೃಂದ, ಜಗದೀಶ ಬಿಸನಳ್ಳಿ, ಬೀರಪ್ಪ ಜಂಗಳಿ, ರೇವನಸಿದ್ದ ಕಟಿಗಾರ, ರವಿ ಆಲೂರ, ಭಾರತಿ ಸೊರಟೂರ, ಲಲಿತಾ ಸಣ್ಣಯರಾಶಿ, ದ್ರಾಕ್ಷಾಯಿಣಿ ಬಂಡಿ, ಖಾಜಾಬಿ ದೊಡ್ಡಮನಿ, ಕುತಿಜಾಬಿ ಆಲೂರ, ಮಂಜುಳಾ ಬಾರಟಕ್ಕಿ ಮುಂತಾದವರಿದ್ದರು.

> ನರಗುಂದ ತಹಸೀಲ್ದಾರ ಶ್ರೀಶೈಲ ವಾಚ್ಯ್. ತಳವಾರ ಮಾತನಾಡಿ, ಅಂದಿನ ನಮ್ಮ ಈ ಗುರುವೃಂದ ವಿದ್ಯಾಭ್ಯಾಸದ ಜೊತೆಗೆ ಸಾಮಾಜಿಕವಾಗಿ ಸಾಂಸ್ಕೃತಿಕವಾಗಿ, ದೈಹಿಕವಾಗಿ ನಮ್ಮನ್ನು ಗಟ್ಟಿಗೊಳಿಸಿದ್ದಾರೆ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka